ಸಂಪುಟ : 11 ಸಂಚಿಕೆ: 09 ಪುಟ : 4+2 ಬೆಲೆ: 3.00 ಬುಧವಾರ ಫೆಬ್ರವರಿ 04 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 09 Pages : 4+2 Price : 3.00 Wednesday February 04 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25




## ಡಿ.ಎಸ್.ಎಸ್ ಪದಾಧಿಕಾರಿಗಳ ಸಭೆ ಫೆ. 10ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಆದೇಶದ ಮೇರೆಗೆ ಗದಗ ಜಿಲ್ಲಾ, ತಾಲೂಕಾ ಮತ್ತು ಗ್ರಾಮೀಣ ಭಾಗದಲ್ಲಿರುವ ಸಮಸ್ಯೆಗಳ ಕುರಿತು ಜಿಲ್ಲಾ ಮತ್ತು ತಾಲೂಕು ಸಮಿತಿಗಳ ಸಭೆಯನ್ನು ಫೆ. 10ರಂದು ಬೆಳಿಗ್ಗೆ 10.30 ಗಂಟೆಗೆ ಮುಳಗುಂದ ನಾಕಾ ಹತ್ತಿರದ ಪ್ರವಾಸಿ ಮಂದಿರದಲ್ಲಿ ಕರೆಯಲಾಗಿದೆ.

ಮುಂಬರುವ 2026–27ನೇ ಸಾಲಿನ ಬಜೆಟ್‌ನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆ ಅನುಗುಣವಾಗಿ 24.10ರಷ್ಟು ಅನುದಾನವನ್ನು ಮೀಸಲು ಇಡಬೇಕು. ಮೀಸಲು ಇಟ್ಟ ಅನುದಾನವನ್ನು ಯಾವುದೇ ಕಾರಣಕ್ಕೂ ದುರ್ಬಳಕೆ ಮಾಡಿಕೊಳ್ಳಬಾರದು ಮತ್ತು ಕಾಯ್ದಿರಿಸಿದ ಅನುದಾನವನ್ನು ದುರ್ಬಳಕೆ ಆಗದಂತೆ ತಡೆಯಲು ಹಾಗೂ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿನ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳಿಗೆ ವಿಶೇಷ ಕಾಯ್ದೆ ಮಾಡುವುದು ಸೇರಿದಂತೆ ಇನ್ನೂ ಅನೇಕ ಸಮಸ್ಯೆಗಳ ಕುರಿತು ಚರ್ಚಿಸಲಾಗುವುದು ಎಂದು ಜಿಲ್ಲಾ ಸಂಚಾಲಕ ದುರ್ಗಪ್ಪ ಎಲ್.ಎಚ್ ಪತ್ರಿಕಾ ಪ್ರಕಟನೆಯ ಮೂಲಕ ತಿಳಿಸಿದ್ದಾರೆ.

### ಕಾನೂನು ಸಾಕ್ಷರತಾ ರಥ ಕಾರ್ಯಕ್ರಮ ಉದ್ಘಾಟಿಸಿದ ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶೆ ನಾಗವೇಣಿ

## ಕಾನೂನು ಅರಿವಿನಿಂದ ಶೋಷಣೆಮುಕ್ತ ಸಮಾಜ




ಡಾ. ಜಗದ್ಗುರು ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿ, ಕೆಲವೆಡೆ ಮಕ್ಕಳನ್ನು ಕೆಲಸಕ್ಕೆ ತೊಡಗಿಸಿಕೊಳ್ಳುತ್ತಿರುವುದು ಖೇದಕರ ಸಂಗತಿಯಾಗಿದೆ. ಪ್ರತಿಯೊಬ್ಬರಿಗೂ ಶಿಕ್ಷಣ ಪಡೆದುಕೊಳ್ಳುವ ಹಕ್ಕು ಇದ್ದು, ಮಕ್ಕಳಿಗೆ ಸೂಕ್ತ ಶಿಕ್ಷಣ ನೀಡಿ ಅವರನ್ನು ದೇಶದ ಉತ್ತಮ ಪ್ರಜೆಗಳನ್ನಾಗಿ ಮಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಜಾತ್ರಾ ಮಹೋತ್ಸವದಲ್ಲಿ 4 ದಿನಗಳ ಕಾಲ ಕಾನೂನಿನ ಕುರಿತು ತಿಳಿವಳಿಕೆ ನೀಡುವುದಲ್ಲದೆ ಸರಕಾರಿ ಸೌಲಭ್ಯ ವಂಚಿತರ ಸಮಸ್ಯೆಗಳಿಗೆ ಸ್ಪಂದಿಸಿ ನ್ಯಾಯ ನೀಡುತ್ತಿರುವುದು ಪ್ರಶಂಸನೀಯ ಎಂದರು.

■ವಿಜಯಸಾಕ್ಷಿ ಸುದ್ದಿ, ಡಂಬಳ

ಕಾನೂನಿನ ಅರಿವಿಲ್ಲದ ಪರಿಣಾಮ ಕೆಲವರು ಶೋಷಣೆಗೆ ಒಳಗಾಗುತ್ತಿದ್ದಾರೆ. ಶೋಷಣೆಮುಕ್ತ ಸಮಾಜ ನಿರ್ಮಿಸುವ ನಿಟ್ಟಿನಲ್ಲಿ ಕಾನೂನು ಸಾಕ್ಷರತಾ ರಥ ಸಂಚರಿಸಿ ಪ್ರತಿಯೊಬ್ಬರಿಗೆ ಕಾನೂನಿನ ಅರಿವು ಮೂಡಿಸುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ನಾಗವೇಣಿ ಹೇಳಿದರು.

ಡಂಬಳ ಗ್ರಾಮದಲ್ಲಿ ಮಂಗಳವಾರ ಶ್ರೀ ತೋಂಟದಾರ್ಯ ಮದರ್ಧನಾರೀಶ್ವರ ಜಾತ್ರಾ ಮಹೋತ್ಸವದ ನಿಮಿತ್ತ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯಿತಿ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಂದಾಯ ಇಲಾಖೆ ಹಾಗೂ ಡಂಬಳ ಗ್ರಾಮ ಪಂಚಾಯಿತಿಗಳ ಸಯುಕ್ತ ಆಶ್ರಯದಲ್ಲಿ ಕಾನೂನು ಸಾಕ್ಷರತಾ ರಥ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಳ್ಳಿ ಹಳ್ಳಿಗಳಲ್ಲಿ ಸಂಚರಿಸಿ ಕಾನೂನಿನ ಜಾಗೃತಿ ಮೂಡಿಸುವದರ ಜತೆಗೆ ಕಾನೂನು ನೆರವು ಹಾಗೂ ಜನತಾ ನ್ಯಾಯಾಲಯಗಳ ಮೂಲಕ ಪ್ರಕರಣ ಇತ್ಯರ್ಥಪಡಿಸುತ್ತಿದೆ. ಕಾನೂನು ಸೇವಾ ಪ್ರಾಧಿಕಾರದ ಮೂಲಕ ದೇಶದ ಶೇ. 80ರಷ್ಟು ಜನತೆ ಉಚಿತ ಕಾನೂನು ನೆರವು ಪಡೆಯಬಹುದಾಗಿದ್ದು, ಈ ಕುರಿತು ಸೂಕ್ತ ಅರಿವು ಇಲ್ಲದ ಕಾರಣ ಸಾರ್ವಜನಿಕರು ಕಾನೂನು ತೊಡಕುಗಳಿಗೆ ಸಿಲುಕಿ ತೊಂದರೆ ಪಡುತ್ತಿದ್ದಾರೆ. ಈ ಬಗ್ಗೆ ಕಾನೂನು ಸಾಕ್ಷರತಾ ರಥ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಗಳ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಹೇಳಿದರು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ಕಾನೂನು ಸೇವಾ ಪ್ರಾಧಿಕಾರವು ಜನಸಾಮಾನ್ಯರಿಗೆ ಕಾನೂನಿನ ಕುರಿತು ಹೆಚ್ಚಿನ ತಿಳುವಳಿಕೆ ನೀಡುವುದು, ಕಾನೂನು ತೊಡಕುಗಳಿಗೆ ಸಿಲುಕಿದವರಿಗೆ ಉಚಿತ ನೆರವು ನೀಡುವುದಲ್ಲದೆ, ರಾಜೀ ಸಂಧಾನ ಮತ್ತು ಲೋಕ ಅದಾಲತ್ ಮೂಲಕ ಪ್ರಕರಣಗಳನ್ನು ತ್ವರಿತ ಇತ್ಯರ್ಥ ಮಾಡುತಿದ್ದು, ಸಮಾಜದ ಎಲ್ಲಾ ಮಹಿಳೆಯರಿಗೆ ಮತ್ತು ಆರ್ಥಿಕ ದುರ್ಬಲ ವರ್ಗದವರಿಗೆ ಉಚಿತ ನೆರವು ನೀಡಲಾಗುತ್ತದೆ. ಇದರ ಪ್ರಯೋಜನ ಪಡೆಯಲು ಮುಂದಾಗಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಂಡರಗಿ ಜೆ.ಎಮ್.ಎಫ್.ಸಿ ನ್ಯಾಯಾಧೀಶೆ ಜ್ಯೋತಿ ಬ.ಕಾಗಿನಕನ, ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್.ಜಿ. ಕಲ್ಲೂರ, ಮುಖ್ಯ ಕಾನೂನು ನೆರವು ಅಭಿರಕ್ಷಕ ಎಸ್.ವಿ. ಗ್ರಾಮಪೂರೋಹಿತ, ಪಿಡಿಒ ಪಾರ್ವತಿ ಹೊಂಬಳ, ಡಿವಾಯ್‌ಎಸ್ಪಿ ಪ್ರಭುಗೌಡ ಕಿರದಳ್ಳಿ, ಉಪತಹಸೀಲ್ದಾರ ಎಸ್.ಎಸ್. ಬಿಚಾಲಿ, ಸಿಪಿಐ ಯಶವಂತ ಬಿಸನಳ್ಳಿ, ಮಹಿಳಾ–ಮಕ್ಕಳ ಉಪನಿರ್ದೇಶಕಿ ಪದ್ಮಾಮತಿ ಜಿ, ಗ್ರಾ.ಪಂ ಅಧ್ಯಕ್ಷೆ ಶಿವಲೀಲಾ ದೇವಪ್ಪ ಬಂಡಿಹಾಳ, ಉಪಾಧ್ಯಕ್ಷೆ ಲಕ್ಷವ್ವ ಕಾಶಭೋವಿ, ಜಾತ್ರಾ ಸಮಿತಿ ಅಧ್ಯಕ್ಷ ಯಲ್ಲಪ್ಪ ದಂಡಿನ, ಉರುಸು ಕಮಿಟಿ ಅಧ್ಯಕ್ಷ ಅಲ್ಲಿಸಾಬ ಮೂಲಿಮನಿ, ನ್ಯಾಯವಾದಿ ಗುರುರಾಜ ಗೌರಿ, ಪಿಡಿಒ ಪಾರ್ವತಿ ಹೊಂಬಳ, ಕಂದಾಯ ಅಧಿಕಾರಿ ಪ್ರಭು ಬಾಗಲಿ, ಅಂಗನವಾಡಿ ಶಿಕ್ಷಕಿಯರು, ಗ್ರಾ.ಪಂ, ಕಾನೂನು ಸಿಬ್ಬಂದಿ ವರ್ಗ, ಪೊಲೀಸ್ ಸಿಬ್ಬಂದಿ ವರ್ಗ, ಕಂದಾಯ ಇಲಾಖೆ ಸಿಬ್ಬಂದಿಗಳು ಇದ್ದರು. ಉಪತಹಸೀಲ್ದಾರ ಎಸ್.ಎಸ್. ಬಿಚಾಲಿ ಸ್ವಗತಿಸಿ ನಿರೂಪಿಸಿದರು. ಗವಿಸಿದ್ದಪ್ಪ ಮೆಟ್ಟಿನ ವಂದಿಸಿದರು.

## Know Your MSME ಕಾರ್ಯಾಗಾರ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸರ್ಕಾರದ ವಿಶ್ವಬ್ಯಾಂಕ್ ನೆರವಿನೊಂದಿಗೆ ಅನುಷ್ಠಾನಗೊಳಿಸಲಾಗುತ್ತಿರುವ ಬ್ಯಾಂಕ್ ಅಧಿಕಾರಿಗಳು ಹಾಗೂ ಜಿಲ್ಲಾ/ತಾಲೂಕು ಮಟ್ಟದ ಅಧಿಕಾರಿಗಳಿಗೆ (MSME) ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಮತ್ತು ವೇಗಗೊಳಿಸಲು Raising and Accelerating MSME Performance ( RAMP) ಯೋಜನೆಯಡಿಯಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಗದಗ ಹಾಗೂ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯುನಿಕೇಶನ್ & ಅಡ್ವರ್ಟೈಜಿಂಗ್ ಲಿ. ಬೆಂಗಳೂರು ಇವರ ಸಹಯೋಗದಲ್ಲಿ Know Your MSME ಕಾರ್ಯಾಗಾರ ಯಶಸ್ವಿಯಾಗಿ ಜರುಗಿತು.

ಕಾರ್ಯಾಗಾರದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಪ್ರಶಾಂತ ಪಿ.ಬಾರಿಗಿಡದ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗದ ಉಪನಿರ್ದೇಶಕ ಅಜಿತ ನಾಯಕ, ಬ್ಯಾಂಕ್ ಅಧಿಕಾರಿಗಳು ಹಾಗೂ ಜಿಲ್ಲಾ/ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾದ ಎಸ್.ಎಸ್. ಮೂರ್ತಿ Know your MSME ಕುರಿತಂತೆ ಪಿ.ಪಿ.ಟಿ ಪ್ರೆಸೆಂಟೇಶನ್ ಮೂಲಕ ಉಪನ್ಯಾಸ ನೀಡಿದರು. ಕಾರ್ಯಾಗಾರದಲ್ಲಿ ಗದಗ ಜಿಲ್ಲೆಯ ಎಲ್ಲಾ ಬ್ಯಾಂಕ್ ಅಧಿಕಾರಿಗಳು ಹಾಗೂ ಜಿಲ್ಲಾ/ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

### ಕರ್ನಾಟಕ ರಾಜ್ಯ ಹಿಂದೂ ಸಂಘಟನೆಗಳ ಒಕ್ಕೂಟದ ರಾಜ್ಯ ಸಂಚಾಲಕ ರಾಜು ಖಾನಪ್ಪನವರ ಆರೋಪ

## ಹಿಂದೂ ದೇವರ ಹೆಸರಿನಲ್ಲಿ ಅನ್ಯಧರ್ಮೀಯರ ವಂಚನೆ




ಈ ವರ್ಷ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಜೊತೆಗೆ ಸಂತ ಸೇವಾಲಾಲ್ ಮಹಾರಾಜರ ಜಯಂತಿಯನ್ನು ಆಚರಿಸಬೇಕು ಎಂದು ಉತ್ಸವ ಸಮಿತಿಯ ಪ್ರಸಕ್ತ ಸಾಲಿನ ಅಧ್ಯಕ್ಷ ಪರಮೇಶ ನಾಯಕ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಿರ್ಧರಿಸಲಾಗಿದೆ. ಇದೇ ಫೆ. 19ರಂದು ಸಂಜೆ 5 ಗಂಟೆಗೆ ನಡೆಯುವ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಅದ್ಧೂರಿಯಾಗಿ ಆಚರಿಸಲಾಗುವುದು ಎಂದು ರಾಜು ಖಾನಪ್ಪನವರ ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದೂ ದೇವತೆಗಳ ಹೆಸರಿನಲ್ಲಿ ಅನ್ಯಧರ್ಮೀಯರು ನಡೆಸುತ್ತಿರುವ ಮೂಢನಂಬಿಕೆ ಹಾಗೂ ವಂಚನೆಯ ಕೃತ್ಯಗಳನ್ನು ತಡೆಯಲು ಹಿಂದೂ ಸಂಘಟನೆಗಳ ಒಕ್ಕೂಟ ಈ ಬಾರಿ ದೃಢ ಸಂಕಲ್ಪ ಮಾಡಿದೆ ಎಂದು ಕರ್ನಾಟಕ ರಾಜ್ಯ ಹಿಂದೂ ಸಂಘಟನೆಗಳ ಒಕ್ಕೂಟದ ರಾಜ್ಯ ಸಂಚಾಲಕ ರಾಜು ಖಾನಪ್ಪನವರ ಎಚ್ಚರಿಸಿದರು.

ಮಂಗಳವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ ನಗರದ ಆಶ್ರಯ ಕಾಲನಿ ಮತ್ತು ನರಸಾಪುರ ಕಾಲನಿಗಳ ಕೆಲವು ಮುಸ್ಲಿಂ ಕುಟುಂಬಗಳು ಢೋಂಗಿ ಬಾಬಾಗಳ ಅವತಾರವೆತ್ತಿ ಯಲ್ಲಮ್ಮ, ದುರ್ಗಮ್ಮದೇವಿ ಹಾಗೂ ಬೀರಲಿಂಗೇಶ್ವರ ದೇವರ ಹೆಸರಿನಲ್ಲಿ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ. ಅಲ್ಲಾ ಒಬ್ಬನೇ ದೇವರು ಎನ್ನುವವರು ಹಿಂದೂ ದೇವತೆಗಳನ್ನು ತಮ್ಮ ಬಂಡವಾಳವನ್ನಾಗಿ ಮಾಡಿಕೊಳ್ಳುತ್ತಿರುವುದು ಖಂಡನೀಯ. ಮುಸ್ಲಿಂ ಧರ್ಮಗುರುಗಳು ಇಂತಹ ಕೃತ್ಯಗಳನ್ನು ಏಕೆ ತಡೆಯುತ್ತಿಲ್ಲ ಎಂದು ಅವರು ಪ್ರಶ್ನಿಸಿದರು.

ಕಳೆದ ನಾಲ್ಕೈದು ವರ್ಷಗಳಿಂದ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಉತ್ಸವ ಸಮಿತಿ ವತಿಯಿಂದ ಮತಾಂತರ ನಿಷೇಧಕ್ಕೆ ಅನೇಕ ಕೆಲಸಗಳನ್ನು ಮಾಡಲಾಯಿತು. ಈ ಬಾರಿ ಹಿಂದೂ ದೇವರನ್ನು ಬಳಸಿಕೊಂಡು ವಂಚನೆ ಮಾಡುತ್ತಿರುವ ಅನ್ಯಧರ್ಮೀಯರ ವಿರುದ್ಧ ಜನರನ್ನು ಜಾಗೃತರನ್ನಾಗಿ ಮಾಡುವ ಸಂಕಲ್ಪ ಮಾಡಿದ್ದೇವೆ ಎಂದರು.

ಇದೇ ಸಂದರ್ಭದಲ್ಲಿ ಛತ್ರಪತಿ ಶಿವಾಜಿ ಮಹಾರಾಜ ಮತ್ತು ಸಂತ ಸೇವಾಲಾರ ಸಂದೇಶಗಳ ಭಿತ್ತಿಪತ್ರ ಅನಾವರಣಗೊಳಿಸಲಾಯಿತು. ಸುದ್ದಿಗೋಷ್ಠಿಯಲ್ಲಿ 2026ನೇ ಸಾಲಿನ ಜಯಂತಿ ಸಮಿತಿ ಅಧ್ಯಕ್ಷ ಪರಮೇಶ ನಾಯಕ, ಮುಖಂಡರಾದ ವಿರೂಪಾಕ್ಷಪ್ಪ ಹೆಬ್ಬಳ್ಳಿ, ಜಗದೀಶ ಪೂಜಾರ, ಮಹೇಶ, ಶಿವಯೋಗಿ ಹಿರೇಮಠ, ಪಿ.ಎಸ್. ಕಾಳೆ, ಸತೀಶ ಕುಂಬಾರ, ವೀರಣ್ಣ ಹೆಬಸೂರ, ಕಿರಣ ಹಿರೇಮಠ, ರಾಜು ಗದ್ದಿ, ಬಸವರಾಜ ಕುರ್ತಕೋಟಿ, ಸುರೇಶ ಹೆಬಸೂರ, ವೆಂಕಟೇಶ ದೊಡ್ಡಮನಿ, ವಿಶಾಲ ಗೋಕಾವಿ ಮುಂತಾದವರು ಉಪಸ್ಥಿತರಿದ್ದರು.

## ತೋಂಟದಾರ್ಯ ಮಠದ ಮದರ್ಧನಾರೀಶ್ವರ ರಥೋತ್ಸವ


■ವಿಜಯಸಾಕ್ಷಿ ಸುದ್ದಿ, ಡಂಬಳ

ಕೋಮು ಸೌಹಾರ್ದತೆ ಹಾಗೂ ಜನಜಾಗೃತಿ ಜಾತ್ರೆ ಎಂದೇ ಪ್ರಸಿದ್ಧಿಯಾಗಿರುವ ಡಂಬಳ ತೋಂಟದಾರ್ಯ ಮಠದ ಮದರ್ಧನಾರೀಶ್ವರ ರಥೋತ್ಸವಕ್ಕೆ ಮಂಗಳವಾರ ಡಂಬಳದ ತ್ರಿವಿಧ ದಾಸೋಹಿ ಜಗದ್ಗುರು ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ರಥದ ಗಾಲಿಗೆ ಪೂಜೆ ಸಲ್ಲಿಸಿ ಚಾಲನೆ ನೀಡಿದರು.

ಮದರ್ಧನಾರೀಶ್ವರರ ಹಾಗೂ ಯಡಿಯೂರ ಸಿದ್ದಲಿಂಗೇಶ್ವರರ ಭಾವಚಿತ್ರಗಳನ್ನು, ಯಡಿಯೂರ ಸಿದ್ದಲಿಂಗೇಶ್ವರರು ರಚಿಸಿದ ಷಟಸ್ಥಲ ಜ್ಞಾನ ಸಾರಾಮೃತ ವಚನದ ಕಟ್ಟುಗಳನ್ನು ಪಲ್ಲಕ್ಕಿಯಲ್ಲಿರಿಸಿ ಮೆರವಣಿಗೆ ಮಾಡಲಾಯಿತು. ಭಕ್ತರು ಉತ್ತತ್ತಿ, ಬಾಳೆಹಣ್ಣು, ಎಸೆದು ಭಕ್ತಿ ಸಮರ್ಪಿಸಿದರು. 20ನೇ ಪೀಠಾಧಿಪತಿಗಳಾದ ಜಗದ್ಗುರು ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ತೇರಿನ ಮುಂದೆ ಭಕ್ತರಂತೆ ಪಾದಚಾರಿಗಳಾಗಿ ಸಾಗಿದ್ದು ವಿಶೇಷವಾಗಿತ್ತು.

ಕೆಳದಿ ಅರಸರು ನೀಡಿದ್ದ ಬಂಗಾರದ ಪಾದುಕೆಯನ್ನೂ ಪಲ್ಲಕ್ಕಿಯಲ್ಲಿರಿಸಿ ರಾಜಗೊಂಡೆ ಹಾಗೂ ಹೂವಿನಿಂದ ಅಲಂಕರಿಸಲಾಗಿದ್ದ ಪಲ್ಲಕ್ಕಿಯ ದರ್ಶನವನ್ನು ಪಡೆದರು.

ಜಾತ್ರಾ ಮಹೋತ್ಸವದಲ್ಲಿ ಮಾಜಿ ಸಚಿವ ಎಸ್.ಎಸ್. ಪಾಟೀಲ್, ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟಿ, ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಯಲ್ಲಪ್ಪ ದಂಡಿನ, ಉಪಾಧ್ಯಕ್ಷ ಯಂಕಣ್ಣ ಗಡಗಿ, ಕಾರ್ಯದರ್ಶಿ ಬುಡ್ನೆಸಾಬ ಅತ್ತಾರ, ಖಜಾಂಚಿ ತಿಮ್ಮಪ್ಪ ವಡ್ಡರ, ಜಿ.ವಿ. ಹಿರೇಮಠ, ಬಸುರಡ್ಡಿ ಬಂಡಿಹಾಳ, ಮಲ್ಲಪ್ಪ ಮಠದ, ಮುದಿಯಪ್ಪ ಗದಗಿನ, ಗವಿಸಿದ್ಧಪ್ಪ ಹಳ್ಳಾಕಾರ, ಮಹೇಶ ಗಡಗಿ, ಮಲ್ಲಿಕಾರ್ಜುನ ಪ್ಯಾಟಿ, ರಾಗು ಹಡಪದ, ದುರಗಪ್ಪ ಹರಿಜನ, ರೇವಣಸಿದ್ಧಪ್ಪ ಕರಿಗಾರ, ಬಸುರಾಜ ಹಮಗಿ, ಮುದಕಪ್ಪ ಮೇವುಂಡಿ, ಗೌಸುಸಾಬ ಆಲೂರ, ನಾಗರಾಜ ಗಡಗಿ ಸೇರಿದಂತೆ ಪದಾಧಿಕಾರಿಗಳು, ಗ್ರಾಮದ ಹಿರಿಯರು, ಭಕ್ತರು ಪಾಲ್ಗೊಂಡರು.



### 'ಅವಿಭಕ್ತ ಕುಟುಂಬದ ಸಾರಥಿ' ಗ್ರಂಥ ಬಿಡುಗಡೆ, ಅಭಿನಂದನಾ ಸಮಾರಂಭದಲ್ಲಿ ಹೊಸಳ್ಳಿ ಶ್ರೀಗಳ ಕರೆ

## ಅವಿಭಕ್ತ ಕುಟುಂಬಗಳು ಒಟ್ಟಾಗಿ ಬಾಳಬೇಕಿದೆ



ಗ್ರಂಥಕಾರ, ಪತ್ರಕರ್ತ ಅಂದಾನೆಪ್ಪ ವಿಭೂತಿ ಅವರು ರಾಮಪ್ಪ ಕಾಶಪ್ಪನವರು ನಡೆದುಬಂದ ಬದುಕಿನ ದಾರಿ ಹಾಗೂ ಗ್ರಂಥದ ಬಗೆಗೆ ವಿವರಿಸಿದರು. ಆಶಯ ನುಡಿಗಳನ್ನಾಡಿದ ಕರ್ನಾಟಕ ಪ್ರದೇಶ ಕುರುಬರ ಸಂಘದ ಅಧ್ಯಕ್ಷ ಫಕ್ಕೀರಪ್ಪ ಹೆಬಸೂರ, 18ನೇ ವಯಸ್ಸಿನಲ್ಲೇ ದುಡಿಯಲು ಪ್ರಾರಂಭಿಸಿದ ರಾಮಪ್ಪನವರ ಪರಿಶ್ರಮದ ಬದುಕನ್ನು ಬಣ್ಣಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ನಾನು, ನನ್ನ ಹೆಂಡತಿ, ನಮ್ಮ ಮಕ್ಕಳು ಈ ಚೌಕಟ್ಟನ್ನೇ ಅವಿಭಕ್ತ ಕುಟುಂಬ ಎನ್ನುವ ಭ್ರಮೆಯಲ್ಲಿರುವವರೇ ಹೆಚ್ಚಿರುವ ಇಂದಿನ ದಿನಮಾನಗಳಲ್ಲಿ, ಗೋಡೆ ಕಟ್ಟಿಕೊಂಡು ಬೇರೆಯಾಗಿ ಬದುಕುವವರೇ ಹೆಚ್ಚಾಗಿರುವ ಇಂದಿನ ದಿನಗಳಲ್ಲಿ ನಿಜವಾದ ಅವಿಭಕ್ತ ಕುಟುಂಬಗಳು ಒಟ್ಟಾಗಿ ಬಾಳಬೇಕಾದ ಅವಶ್ಯಕತೆ ಇದೆ ಎಂದು ಹೊಸಳ್ಳಿಯ ಜ. ಬೂದೀಶ್ವರ ಸಂಸ್ಥಾನಮಠದ ಪೂಜ್ಯ ಅಭಿನವ ಜ. ಬೂದೀಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಗದುಗಿನ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಆವರಣದ ವಿವೇಕಾನಂದ ಸಾಂಸ್ಕೃತಿಕ ಸಭಾ ಭವನದಲ್ಲಿ ರಾಮಪ್ಪ ರಂಗಪ್ಪ ಕಾಶಪ್ಪನವರ ಅಭಿಮಾನಿ ಬಳಗ ಗದಗ ಇವರ ಸಹಕಾರದೊಂದಿಗೆ ಗದುಗಿನ ಶ್ರೀ ವಿವೇಕಾನಂದ ಸಾಂಸ್ಕೃತಿಕ ಸಮಿತಿ ಗದಗ ಇವರ ಸಹಯೋಗದಲ್ಲಿ ರಾಮಪ್ಪ ರಂಗಪ್ಪ ಕಾಶಪ್ಪನವರ ಸೇವಾ ನಿವೃತ್ತಿ ನಿಮಿತ್ತ 'ಅವಿಭಕ್ತ ಕುಟುಂಬದ ಸಾರಥಿ' ಗ್ರಂಥ ಬಿಡುಗಡೆ ಹಾಗೂ ಅಭಿನಂದನಾ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಅವಿಭಕ್ತ ಕುಟುಂಬದಲ್ಲಿರುವ ಪ್ರೀತಿ, ಅಂತಃಕರಣ, ವಿಶಾಲ ಮನೋಭಾವ, ಒಗ್ಗಟ್ಟು ಇವುಗಳನ್ನು ಇಂದಿನ ಪೀಳಿಗೆಗೆ ತಿಳಿಸಬೇಕಾದ ಜವಾಬ್ದಾರಿ ಪಾಲಕರ ಮೇಲಿದೆ. ಅವಿಭಕ್ತ ಕುಟುಂಬವನ್ನು ಈಗಲೂ ಮುನ್ನಡೆಸುತ್ತಿರುವ ಪ್ರೀತಿ–ಬಾಂಧವ್ಯಗಳನ್ನು ಗಟ್ಟಿಯಾಗಿ ಜೋಪಾನವಾಗಿರಿಸಿಕೊಂಡಿರುವ ರಾಮಪ್ಪ ಕಾಶಪ್ಪನವರ ಕುಟುಂಬ ವರ್ಗವನ್ನು ಅಭಿನಂದಿಸಿ ಇದೊಂದು ಮಾದರಿ ಎಂದರು. ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ ಗ್ರಂಥ ಬಿಡುಗಡೆ ಮಾಡಿದರು.

ಅಭಿನಂದನಾ ನುಡಿಗಳನ್ನಾಡಿದ ಗದಗ ಸಾಯಿ ಮಂದಿರದ ಸಂಸ್ಥಾಪಕ ಅಧ್ಯಕ್ಷ ಡಾ. ಎಸ್.ಬಿ. ಶೆಟ್ಟರ, ಕಾಶಪ್ಪನವರ ಸಾಮಾಜಿಕ ಕಾರ್ಯಗಳನ್ನು ಹಾಗೂ ಅವಿಭಕ್ತ ಕುಟುಂಬವನ್ನು ಮುನ್ನಡೆಸಿಕೊಂಡು ಬಂದಿರುವದನ್ನು ಶ್ಲಾಘಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಗದುಗಿನ ಕನಕದಾಸ ಶಿಕ್ಷಣ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಡಾ. ಬಿ.ಎಫ್. ದಂಡಿನ ರಾಮಣ್ಣ ಕಾಶಪ್ಪನವರ 40 ವರ್ಷದ ವೃತ್ತಿ ಬದುಕನ್ನು ಮೆಲುಕು ಹಾಕಿದರು. ವೇದಿಕೆಯ ಮೇಲೆ ಆರ್.ಆರ್. ಕಾಶಪ್ಪನವರ ದಂಪತಿ, ಶಕುಂತಲಾ ದಂಡಿನ ಉಪಸ್ಥಿತರಿದ್ದರು.

ಮುಖ್ಯ ಅತಿಥಿಗಳಾಗಿ ಗಣ್ಯರಾದ ವ್ಹಿ.ವೈ. ಮಕ್ಕಣ್ಣವರ, ಶಾಂತಣ್ಣ ಕಡಿವಾಲ, ಬಿ.ಎನ್. ಯರನಾಳ, ಶಂಕರ ಹಾನಗಲ್ಲ, ಎಂ.ಎನ್. ಕಾಮನಹಳ್ಳಿ, ಎ.ಕೆ. ತಮ್ಮಣ್ಣವರ, ಮಹೇಶ ತಲೇಗೌಡ್ರ, ಡಾ. ಎಸ್.ಎಫ್. ಜಕಬಾಳ, ಸಿದ್ಧಣ್ಣ ಪಟ್ಟಣಶೆಟ್ಟಿ, ಎ.ಟಿ. ನರೇಗಲ್ಲ, ಎಸ್.ಎಸ್. ಪಾಟೀಲ, ವ್ಹಿ.ಕೆ. ಗುರುಮಠ, ಎಸ್.ಕೆ. ವಂಡಕರ ಆಗಮಿಸಿದ್ದರು.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ. ಬಾಹುಬಲಿ ಜೈನರ್ ನಿರೂಪಿಸಿದರು.

**ಡಂಬಳ ಮದರ್ಧನಾರೀಶ್ವರರ 286ನೇ ಜಾತ್ರಾ ಮಹೋತ್ಸವದ ಲಘು ರಥೋತ್ಸವದ ನಿಮಿತ್ತ ಲೇಖನ**

# ವೈಚಾರಿಕತೆಯ ತೇರೆಳೆಯುವ ಡಂಬಳ ಜಾತ್ರೆ



ಪರಿಸರದಲ್ಲಿ ಗಾಳಿ, ಮಳೆ, ಸೂರ್ಯನ ಕಿರಣಗಳಿಗೆ ಯಾವುದೇ ಜಾತಿ, ಮತ, ಪಂಥದ ಭೇದವಿಲ್ಲದಂತೆ, ಈ ಮಠದ ಭಕ್ತರು ಕೂಡ ಯಾವುದೇ ಭೇದಭಾವವಿಲ್ಲದೆ ರೊಟ್ಟಿ ತಯಾರಿಸಿ ಎಲ್ಲರೂ ಸೇರಿ ಸವಿಯುತ್ತಾರೆ. ಇದೇ ಭಾವೈಕ್ಯತೆಯ ಸಂದೇಶವನ್ನು ಸಾರುವ ಜಾತ್ಯಾತೀತ ರೊಟ್ಟಿ ಜಾತ್ರೆಯಾಗಿದೆ. ಸಮಾಜದಲ್ಲಿ ಸಮಾನತೆ, ಸಹಬಾಳ್ವೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಇಂತಹ ಆಚರಣೆಗಳು ಮಹತ್ವದ ಪಾತ್ರ ವಹಿಸುತ್ತವೆ.

– **ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು.**
ಸಂಸ್ಥಾನಮಠ, ಡಂಬಳ-ಗದಗ.



ಇಂದಿಗೂ ಜಾತಿ ಆಚರಣೆ ಮತ್ತು ಮೌಢ್ಯದ ಹೆಸರಿನಲ್ಲಿ ಜನರನ್ನು ವಿಭಜಿಸುವ ಶಕ್ತಿಗಳ ನಡುವೆ ರೊಟ್ಟಿ ಜಾತ್ರೆಯನ್ನು ವೈಜ್ಞಾನಿಕ ಹಾಗೂ ವೈಚಾರಿಕ ಚಿಂತನೆಯೊಂದಿಗೆ ಮುಂದುವರೆಸುತ್ತಿರುವ ಡಾ. ತೋಂಟದ ಸಿದ್ಧರಾಮ ಶ್ರೀಗಳ ಕಾರ್ಯ ಇಂದಿನ ಕಾಲಘಟ್ಟಕ್ಕೆ ಅಗತ್ಯವಾದ ದಿಟ್ಟ ಸಂದೇಶವಾಗಿದೆ.

– **ಬಸುರಡ್ಡಿ ದೇವಪ್ಪ ಬಂಡಿಹಾಳ,** ಯುವ ಮುಖಂಡ, ಡಂಬಳ.

286ನೇ ಜಾತ್ರೆಯನ್ನು ವೈಚಾರಿಕ ವೈಶಿಷ್ಟ್ಯದ ಮೂಲಕ ಜಾತಿ, ಮತ, ಪಂಥ ಬೇಧ ಭಾವ ತೊರೆಯುವ ನಿಟ್ಟಿನಲ್ಲಿ ರೊಟ್ಟಿ ಜಾತ್ರೆಯ ಮೂಲಕ ಸಮ ಸಮಾಜ ಕಟ್ಟಲು ಮತ್ತು ಮಠದಲ್ಲಿ ಮಹಾತ್ಮರ, ದಾರ್ಶನಿಕರ, ಸಂತರ, ಆದರ್ಶ ಮೌಲ್ಯಗಳನ್ನು ಶಿವಾನುಭಗಳಲ್ಲಿ ನೆನೆದು ಭಕ್ತರ ನೆತ್ತಿಗೆ ಜ್ಞಾನದ ಬುತ್ತಿ ತುಂಬುತ್ತಿರುವ ಪರಮಪೂಜ್ಯ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಕಾರ್ಯ ಅನನ್ಯವಾದುದು.

– **ಮಿಥುನ (ಸಂಗನಗೌಡ) ಜಿ.ಪಾಟೀಲ.**
ರೋಣ ಮತಕ್ಷೇತ್ರದ ಗ್ಯಾರಂಟಿ ಸಮಿತಿ ಅಧ್ಯಕ್ಷ.

ಜಾತ್ರೆ ನೆಪದಲ್ಲಿ ಸಾಮಾಜಿಕ ಪರಿವರ್ತನೆ ಮಾಡಿ ಸಾಮರಸ್ಯದ ತೇರು ಎಳೆಯುತ್ತಿದ್ದಾರೆ ಡಂಬಳದ ತೋಂಟದಾರ್ಯ ಮಠದ ತೋಂಟದ ಡಾ. ಸಿದ್ಧರಾಮ ಮಹಾಸ್ವಾಮಿಗಳು. ಮಠದ ಮದರ್ಧನಾರೀಶ್ವರರ 286ನೇ ಜಾತ್ರಾ ಮಹೋತ್ಸವದ ರಥೋತ್ಸವವು ಫೆ. 3ರಂದು ರಥೋತ್ಸವ ಸಂಭ್ರಮದಿಂದ ನಡೆದಿದ್ದು, ಫೆ. 4ರಂದು ಲಘು ರಥೋತ್ಸವ ವಿಜೃಂಭಣೆಯಿಂದ ನಡೆಯಲಿದೆ.

ಸಮ ಸಮಾಜಕ್ಕಾಗಿ ಮೌಢ್ಯ, ಅಂಧಕಾರದಲ್ಲಿ ಮುಳಗಿ ಅಜ್ಞಾನದ ಮಡುವಿನಲ್ಲಿರುವ ಸಮಾಜದ ಕೊಳೆ ತೊಳೆಯುವ ನಿಟ್ಟಿನಲ್ಲಿ ತೋಂಟದ ಡಾ. ಸಿದ್ದಲಿಂಗ ಸ್ವಾಮೀಜಿಗಳ ನಂತರ ತೋಂಟದ ಡಾ. ಸಿದ್ಧರಾಮ ಶ್ರೀಗಳು ಅವರು ಜಾತೆಗೆ ಹೊಸ ಮೆರಗು ನೀಡುವ ನಿಟ್ಟಿನಲ್ಲಿ ವೈಚಾರಿಕತೆಯ ತೇರು ಎಳೆಯಲು ಭಕ್ತರಿಗೆ ಅನುಕೂಲ ಕಲ್ಪಿಸಿದ್ದಾರೆ.

ರಾಷ್ಟ್ರೀಯ ಮಟ್ಟದಲ್ಲಿ ಕೋಮು ಸೌಹಾರ್ದತೆ ಮೆರೆದಿರುವ ಎಡೆಯೂರ-ಡಂಬಳ-ಗದಗ ತೋಂಟದಾರ್ಯ ಮಠವನ್ನು ಲಿಂ. ಡಾ. ಸಿದ್ದಲಿಂಗ ಸ್ವಾಮೀಜಿಯವರ ಮಠ ಎಂಬ ಪರಿಕಲ್ಪನೆಗೆ ಹೊಸ ಭಾಷ್ಯ ಬರೆದಿದ್ದರು. ನಂತರ ಜಗದ್ಗುರು ಡಾ. ಸಿದ್ಧರಾಮ ಮಹಾಸ್ವಾಮಿಗಳು ಇಂಗ್ಲಿಷೇತರ ಭಾಷೆಗಳಿಂದ 'ತೌಲನಿಕ ಧರ್ಮದರ್ಶನ'ವನ್ನು ಅನುವಾದ ಮಾಡವುದರ ಮೂಲಕ ಕುವೆಂಪು ಭಾಷಾ ಭಾರತಿ ಗೌರವ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಮಠಗಳು ಸಾಮಾನ್ಯರ ನೋವು, ನಲಿವುಗಳಿಗೆ ಸ್ಪಂದಿಸಬೇಕು, ದೇಶಕ್ಕೆ ಬಡತನ, ನಿರುದ್ಯೋಗ, ಮತೀಯ ಗಲಭೆಗಳು, ಭಾಷೆ-ಗಡಿ ಸಮಸ್ಯೆಗಳು ಏಕತೆಗೆ ಧಕ್ಕೆ ತರುತ್ತವೆ ಎಂದು ಅರಿತು ಜಾತ್ರೆಗಳಲ್ಲಿ ಸಾಹಿತ್ಯ ಸಮ್ಮೇಳನ, ವಿಚಾರಗೋಷ್ಠಿ, ಉಪನ್ಯಾಸ, ಸಾಂಸ್ಕೃತಿಕ ಕಾರ್ಯಗಳ ಮೂಲಕ ಜನತೆಯಲ್ಲಿ ಸಮಗ್ರತೆ ಕಾಪಾಡುವ ಕೈಂಕರ್ಯದಲ್ಲಿ ತೋಂಟದಾರ್ಯ ಮಠ ತೊಡಗಿಸಿಕೊಂಡಿದೆ.


ಲಿಂ. ಡಾ. ಸಿದ್ಧಲಿಂಗ ಶ್ರೀಗಳಂತೆ ತೋಂಟದ ಡಾ. ಸಿದ್ಧರಾಮ ಶ್ರೀ ಪೀಠಾರೋಹಣ ಮಾಡಿದ ನಂತರ ಬಸವಣ್ಣನವರ ಸಮಾನತೆಯ ಕನಸನ್ನು ನನಸಾಗಿಸುವ ನಿಟ್ಟಿನಲ್ಲಿ ಅಡ್ಡಪಲ್ಲಕ್ಕಿಯಲ್ಲಿ ಸ್ವಾಮಿಗಳು ಮೆರೆಯಬಾರದು, ಮನುಷ್ಯರನ್ನು ಮನುಷ್ಯರು ಹೊರುವುದು ಹೀನ ಕೆಲಸ ಎಂದು ಪಲ್ಲಕ್ಕಿ ತ್ಯಾಗ ಮಾಡಿ, ಪಲ್ಲಕ್ಕಿ ಮುಂದೆ ಪಾದಚಾರಿಗಳಾಗಿ ಸಾಮಾನ್ಯ ಭಕ್ತರ ಮಧ್ಯೆ ಹೋಗುತ್ತಿದ್ದಾರೆ.

ಮೌಢ್ಯ, ಕಂದಾಚಾರ, ಸಮಾಜದ ಅವನತಿಗೆ ಕಾರಣ ಎಂದು ಮನಗಂಡು ಶಿಕ್ಷಣ, ಆರೋಗ್ಯ, ಪರಿಸರ, ನಾಡು ನುಡಿ ಪುಸ್ತಕ ಪ್ರಕಟಣೆ ಅನ್ನದಾಸೋಹ ಸೇರಿದಂತೆ ಜನಪರ ಕಾರ್ಯ ಕೈಗೊಂಡು ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸು ಎಂಬ ಬಸವಣ್ಣವರ ವಾಣಿಯನ್ನು ಸಹಕಾರಗೊಳಿಸಲು ಡಾ.ಸಿದ್ಧರಾಮ ಸ್ವಾಮೀಜಿಯವರು ಕೂಡಾ ಶಿವಾನುಭವ ಕಾರ್ಯಕ್ರಮಗಳ ಮೂಲಕ ಸಾಹಿತಿಗಳಿಗೆ, ಕಲಾವಿದರಿಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಗೌರವಿಸಿ ಬಸವಣ್ಣವರ ಅನುಭವ ಮಂಟಪದ ಸವಿ ಸಂಭ್ರಮಕ್ಕೆ ಮುನ್ನುಡಿ ಬರೆಯುತ್ತಿದ್ದಾರೆ.

ಫೆ. 4ರಂದು ಸಂಜೆ 6.30ಕ್ಕೆ ಲಘು ರಥೋತ್ಸವದಲ್ಲಿ ತೋಂಟದ ಡಾ. ಸಿದ್ಧರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮಾಜಿ ಸಚಿವ ಎಸ್. ಎಸ್. ಪಾಟೀಲ, ಮಾಜಿ ಸಚಿವ ಕಳಕಪ್ಪ ಬಂಡಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಪಾಲ್ಗೊಳ್ಳಲಿದ್ದಾರೆ. ಉತ್ತರ ಕರ್ನಾಟಕದ ಗಟ್ಟಿ ಆಹಾರ ರೊಟ್ಟಿ ಜಾತ್ರೆ ರಾತ್ರಿ 8ಕ್ಕೆ ನಡೆಯಲಿದ್ದು, ಹಲವಾರು ಜಿಲ್ಲೆಯ ಜನರು ಕಡಕ್ ರೊಟ್ಟಿ ಸವಿಯಲಿದ್ದಾರೆ.

– **ಕೆ.ಆರ್. ದೊಡ್ಡಮನಿ,** ಡಂಬಳ.

# ಪರಿಸರ ಸ್ನೇಹಿ ವಿದ್ಯುತ್ ಉತ್ಪಾದನೆಯ ಗುರಿ




**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ರಾಜ್ಯದಲ್ಲಿ ಪರಿಸರ ಸ್ನೇಹಿ ವಿದ್ಯುತ್ ಉತ್ಪಾದನೆಗೆ ಇನ್ನಷ್ಟು ಪ್ರಾಶಸ್ತ್ಯ ನೀಡುವ ಗುರಿ ಹೊಂದಲಾಗಿದೆ ಎಂದು ಸೆರೆಂಟಿಕ್ ವಿದ್ಯುತ್ ಕಂಪನಿಯ ಮ್ಯಾನೇಜರ್ ರಾಜೇಂದ್ರ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆಯಲ್ಲಿ ಸೆರೆಂಟಿಕ್ ವಿದ್ಯುತ್ ಕಂಪನಿ ಹಾಗೂ ದಿ. ಸಿ.ಬಿ. ಬಡ್ನಿ ಸೇವಾ ಪ್ರತಿಷ್ಠಾನ ವತಿಯಿಂದ ಪವನ ವಿದ್ಯುತ್ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ರೈತರು, ಗ್ರಾಹಕರು, ಉದ್ಯಮಿಗಳ ಒಳಿತು ಬಯಸುವ ಉದ್ದೇಶದಿಂದ ದೇಶ ಹಾಗೂ ರಾಜ್ಯದ ಪ್ರತಿ ಹಳ್ಳಿಗಳಿಗೂ ವಿದ್ಯುತ್ ನೀಡುವ ಗುರಿಯನ್ನು ಇಲಾಖೆ ಹೊಂದಿದ್ದು, ಇದರಿಂದ ಯಾವ ದುಷ್ಪರಿಣಾಮವೂ ಇಲ್ಲ ಎಂದರು.

ಎಸ್.ಸಿ. ಬಡ್ನಿ ಮಾತನಾಡಿ, ಮಕ್ಕಳು ಪ್ರಾಥಮಿಕ ಹಾಗೂ ಪ್ರೌಢ ಹಂತದಲ್ಲಿ ಗುರುಗಳು, ತಂದೆ-ತಾಯಿಗಳು ಹೇಳಿದ ಮಾತುಗಳನ್ನು ಕೇಳಬೇಕು. ನಮ್ಮ ಸಂಸ್ಕೃತಿ, ಸಂಸ್ಕಾರ ಅನುಸರಿಸಿ ಬದುಕಬೇಕು. ಪವನ ವಿದ್ಯುತ್ ಉತ್ಪಾದನೆಯಿಂದ ಪರಿಸರಕ್ಕೆ ಯಾವುದೇ ಹಾನಿಯಾಗುವುದಿಲ್ಲ. ಈ ನಿಟ್ಟಿನಲ್ಲಿ ಸೆರೆಂಟಿಕ್ ವಿದ್ಯುತ್ ಕಂಪನಿ ಕೇವಲ ವಿದ್ಯುತ್ ಉತ್ಪಾನೆ ಮಾಡದೇ ಸಾಮಾಜಿಕ, ಶೈಕ್ಷಣಿಕ ಕಾರ್ಯಕ್ಕೆ ಮುಂದಾಗಿರುವುದು ಶ್ಲಾಘನೀಯ ಎಂದರು.

ರಾಜೇಶ್ವರಿ ಬಡ್ನಿ ಮಾತನಾಡಿ, ಮುಂದಿನ ಪೀಳಿಗೆಗೆ ನಾವೆಲ್ಲರೂ ಪರಿಸರ ಉಳಿಸಿ ಬೆಳೆಸಬೇಕು, ಆ ನಿಟ್ಟಿನಲ್ಲಿ ಸೆರೆಂಟಿಕ್ ವಿದ್ಯುತ್ ಕಂಪನಿ ಪವನ ವಿದ್ಯುತ್ ಉತ್ಪಾದಿಸುವ ಮೂಲಕ ಪರಿಸರ ಸ್ನೇಹಿಯಾಗಿದೆ ಎಂದರು.

ಶಾಲಾ ಪ್ರಧಾನ ಗುರು ಎಸ್.ಎಚ್. ಪೂಜಾರ, ಗುಳಪ್ಪ ಮಜ್ಜಿಗುಡ್ಡ, ಶಿವಾನಂದ ಹುಣಶಿಮರದ, ವಿನಾಯಕ ಶೆಟ್ಟರ, ಹನುಮಂತಪ್ಪ ಹಿರಾಳಗುಂಡಿ. ನೂರಹ್ಮದ ನದಾಫ್, ವಿ.ಟಿ. ಅಂಗಡಿ, ಗೀತಾ ಪಾಟೀಲ, ಗೀತಾ ಕುಂದರಗಿ, ಎಸ್.ವಿ. ತಿಮ್ಮಾಪೂರ ಇದ್ದರು.

**ಬೀಳ್ಕೊಡುಗೆ ಸಮಾರಂಭ**

# ಎನ್‌ಸಿಸಿಯಿಂದ ಮೂಡುತ್ತೆ ಶಿಸ್ತು, ಏಕತೆ: ಗುರಿಕಾರ



**■ವಿಜಯಸಾಕ್ಷಿ ಸುದ್ದಿ, ಗಂಗಾವತಿ:**

ಕಾಲೇಜಿನಲ್ಲಿರುವ ಎನ್‌ಸಿಸಿ ಘಟಕವು ವಿದ್ಯಾರ್ಥಿದೆಸೆಯಿಂದಲೇ ಏಕತೆ ಮೂಡಲು ಸಹಕಾರಿ. ಜೊತೆಗೆ ಶಿಸ್ತು ಬೆಳೆಸಿಕೊಳ್ಳಲು ರಹದಾರಿ ಎಂದು ನಗರದ ಎಸ್‌ಕೆಎನ್‌ಜಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ.ಶಿವರಾಜ ಗುರಿಕಾರ ಹೇಳಿದರು.

ಕಾಲೇಜಿನಲ್ಲಿ ಮಂಗಳವಾರ ಅಂತಿಮ ವರ್ಷದ. ಎನ್‌ಸಿಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಎನ್‌ಸಿಸಿ ಸೇರುವುದರಿಂದ ಭವಿಷ್ಯದಲ್ಲಿರುವ ಅವಕಾಶಗಳ ಕುರಿತು ವಿವರಿಸಿದರು

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಎನ್‌ಸಿಸಿ ಹವಾಲ್ದಾರ ಲಕ್ವಿಂದರ್‌ಸಿಂಗ್ ಮಾತನಾಡಿ, ಸಮಾಜದಲ್ಲಿ ಎನ್‌ಸಿಸಿಯ ಮಹತ್ವ ವಿವರಿಸಿ, ಉದ್ದೇಶಗಳನ್ನು ತಿಳಿಸುವುದರ ಜೊತೆಗೆ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಲು ಎನ್‌ಸಿಸಿ ಮುಖ್ಯವಾದುದು ಎಂದರು.

ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದ ಕಾಲೇಜಿನ ಎನ್‌ಸಿಸಿ ಘಟಕದ ಸಹ ಆಡಳಿತಾಧಿಕಾರಿ ಡಾ.ಅಶೋಕ ಕೆ ಅವರು, ಕಾಲೇಜಿನ ಎನ್‌ಸಿಸಿ ವಿದ್ಯಾರ್ಥಿಗಳ ಸೇವೆಗಳನ್ನು ಸ್ಮರಿಸಿ ಸಮಾಜಸೇವೆಗೆ ಎನ್‌ಸಿಸಿ ಕೊಡುಗೆ ಅಪಾರ ಎಂದು ಹೇಳಿದರು.

ಈ ವೇಳೆ ಸಹಾಯಕ ಪ್ರಾಧ್ಯಾಪಕರಾದ ಮಲ್ಲಿಕಾರ್ಜುನ ಡಿ, ರಾಧಾ, ಕಾಲೇಜಿನ ಬೋಧಕ - ಬೋಧಕೇತರ ಸಿಬ್ಬಂದಿ ಇದ್ದರು. ಕವಿತಾ ಬಿ. ನಿರೂಪಿಸಿದರು. ಪವನ್‌ಕುಮಾರ್ ವಂದಿಸಿದರು.

# ಮಾಚಿದೇವರ ವಚನ ಸಾಹಿತ್ಯ ಇಂದಿಗೂ ಪ್ರಸ್ತುತ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಡಿವಾಳ ಮಾಚಿದೇವರ ವಚನ ಸಾಹಿತ್ಯಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಪಿ.ಎಸ್. ಮರಿದೇವರಮಠ ಹೇಳಿದರು.

ಅವರು ಪಟ್ಟಣದ ನಿವೃತ್ತ ಶಿಕ್ಷಕ ಬಿ.ಜಿ. ಯಳವತ್ತಿ ಅವರ ನಿವಾಸದಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ವೇದಿಕೆ ವತಿಯಿಂದ ಮನೆ, ಮನದಲ್ಲಿ ಶರಣ ಸಂಸ್ಕೃತಿ ಹಾಗೂ ಮಡಿವಾಳ ಮಾಚಿದೇವರ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಮಡಿವಾಳ ಮಾಚಿದೇವರು 12ನೇ ಶತಮಾನದ ಪ್ರಸಿದ್ಧ ವಚನಕಾರರು. ತಮ್ಮ ಕಾಯಕ ನಿಷ್ಠೆಯಿಂದ ಹಾಗೂ ವಚನಗಳ ಮೂಲಕ ಸಮಾಜದಲ್ಲಿನ ತಾರತಮ್ಯ, ಅಂಕು-ಡೊಂಕು ತಿದ್ದುವ ಮೂಲಕ ಸಮಾಜ ಸುಧಾರಣೆಗಾಗಿ ಶ್ರಮಿಸಿದವರು. ಇಂತಹ ಶರಣರ ತತ್ವಾದರ್ಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದರು. ನಿವೃತ್ತ ಉಪನ್ಯಾಸಕ ಬಿ.ಜಿ. ಯಳವತ್ತಿ ಮಾತನಾಡಿ, ಮಡಿವಾಳ ಮಾಚಿದೇವರು ಬಸವಣ್ಣನವರ ತತ್ವಗಳಿಂದ ಪ್ರೇರಿತರಾದವರು. ಮಡಿವಾಳ ಮಾಚಿದೇವರು ಸಮಾಜದಲ್ಲಿ ಸಮಾನತೆಗಾಗಿ ಶ್ರಮಿಸಿದವರು ಎಂದರು.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಕದಳಿ ವೇದಿಕೆ ಅಧ್ಯಕ್ಷೆ ರಾಜೇಶ್ವರಿ ಬಡ್ನಿ, ಸುಮಿತ್ರಾ ಬಿನ್ನಾಳ, ಸುಮನ್ ಚವಡಿ, ಶೋಭಾ ಪಾಟೀಲ, ವಿರೂಪಾಕ್ಷಪ್ಪ ಮಡಿವಾಳರ, ಮೋಹನ ರಸಾಳಕರ, ಅಕ್ಕಮ್ಮಾ ನೀಲಗುಂದ, ಗೌರಮ್ಮಾ ಹಾಳಕೇರಿ, ಲಕ್ಷ್ಮೀ ಗುಲಗಂಜಿ, ಮಂಜುನಾಥ ರಸಾಳಕರ, ರೇಣುಕಾ ರಸಾಳಕರ ಇದ್ದರು.

# ಸ್ಪರ್ಶ ಕುಷ್ಟರೋಗ ಜಾಗೃತಿ ಅಭಿಯಾನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸ್ಪರ್ಶ ಕುಷ್ಟರೋಗ ಜಾಗೃತಿ ಅಭಿಯಾನ 30ನೇ ಜನವರಿ 2026ರಿಂದ 13ನೇ ಫೆಬ್ರವರಿ 2026ರವರೆಗೆ ನಡೆಯುತ್ತಿದ್ದು, ಸಾರ್ವಜನಿಕರಿಗೆ ತಿಳುವಳಿಕೆ ನೀಡುವ ಉದ್ದೇಶದಿಂದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ನರೇಗಲ್ಲ ಸಮುದಾಯ ಆರೋಗ್ಯ ಕೇಂದ್ರದ ಡಾ. ಎ.ಡಿ. ಸಾಮುದ್ರಿ ಹೇಳಿದರು.

ನರೇಗಲ್ಲ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಸ್ಪರ್ಶ ಕುಷ್ಟರೋಗ ಜಾಗೃತಿ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆರಂಭಿಕ ಹಂತದಲ್ಲಿ ಗುರುತಿಸಿ ಕ್ರಮಬದ್ಧ ಚಿಕಿತ್ಸೆ ಪಡೆದಲ್ಲಿ ಸ್ಪರ್ಶ ಕುಷ್ಟರೋಗವನ್ನು ತಡೆಯಬಹುದು ಮತ್ತು ಒಬ್ಬರಿಂದ ಮತ್ತೊಬ್ಬರಿಗೆ ಹರಡುವ ಸೋಂಕನ್ನು ನಿಲ್ಲಿಸಬಹುದು. ಚಿಕಿತ್ಸಾ ಅವಧಿ ಆರು ತಿಂಗಳು ಮತ್ತು 12 ತಿಂಗಳದ್ದಾಗಿದ್ದು, ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಂಪೂರ್ಣ ಉಚಿತವಾಗಿ ಎಂಡಿಟಿ ದೊರೆಯುತ್ತದೆ ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ ಜಾಲಿಹಾಳ ಮಾತನಾಡಿ, ಕುಷ್ಠರೋಗ ಮೈಕೋ ಬ್ಯಾಕ್ಟೀರಿಯಾ ಲೆಪ್ರೆ ಎಂಬ ರೋಗಾಣುವಿನಿಂದ ಬರುತ್ತದೆ. 1873ರಲ್ಲಿ ಗರ್ಹಾರ್ಡ್ ಹೆನ್ರಿಕ್ ಅರ್ಮರ್ ಹ್ಯಾನ್ಸೆನ್ ಎಂಬ ನಾರ್ವೆ ದೇಶದ ವಿಜ್ಞಾನಿ ಕುಷ್ಟರೋಗವನ್ನು ಕಂಡುಹಿಡಿದಿದ್ದು, ಬಹು ಔಷಧಿ ಚಿಕಿತ್ಸೆ ಪಡೆದುಕೊಂಡು ರೋಗದಿಂದ ಮುಕ್ತರಾಗಬಹುದು ಎಂದರು.

ಈ ಸಂದರ್ಭದಲ್ಲಿ ಮಂಜುನಾಥ ದೊಡ್ಡಮನಿ, ಮುತ್ತಣ್ಣ ಮನಿನಾಗರ, ಸಂಗೀತಾ ಮುಚಖಂಡಿ, ವಿಜಯಲಕ್ಷ್ಮೀ ಪೊಲೀಸ್‌ಪಾಟೀಲ, ರೆಹಮತ್‌ಬಾನು ಶರಭತ್ವಾಲ, ಶಂಭುಲಿಂಗಯ್ಯ ಹಿರೇಮಠ ಸೇರಿದಂತೆ ಸಿಬ್ಬರ್ಗಳು ಇದ್ದರು.




# ಮನೆಗೋಡೆ ಕುಸಿದು ಇಬ್ಬರು ಕಾರ್ಮಿಕರು ಸ್ಥಳದಲ್ಲೇ ಸಾವು!







**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ನರಗುಂದ ತಾಲೂಕಿನ ಕಲಕೇರಿ ಗ್ರಾಮದಲ್ಲಿ ಮನೆ ಗೋಡೆ ಕುಸಿದು ಇಬ್ಬರು ಕಾರ್ಮಿಕರು ಸ್ಥಳದಲ್ಲೇ ಸಾವನ್ನಪ್ಪಿದ ದುರ್ಘಟನೆ ಮಂಗಳವಾರ ಮಧ್ಯಾಹ್ನ ನಡೆದಿದೆ.

ಯಲ್ಲಪ್ಪ ಕೆಳಗೇರಿ ಅವರಿಗೆ ಸೇರಿರುವ ಹಳೆಯ ಮನೆಯ ಗೋಡೆಯನ್ನು ಕೆಡುವು ಸಂದರ್ಭದಲ್ಲಿ, ಗೋಡೆ ಏಕಾಏಕಿ ಕಾರ್ಮಿಕರ ಮೇಲೆ ಕುಸಿದಿದೆ.

ಇದರಿಂದಾಗಿ ಮಣ್ಣಿನ ಅವಶೇಷದಡಿ ಸಿಲುಕಿದ ಪರಿಣಾಮ ನಾಗಪ್ಪ ದೊಡ್ಡಮನಿ (60) ಮತ್ತು ಶೇಖಪ್ಪ ಪರಸಪ್ಪನವರ್ (55) ಮೃತಪಟ್ಟಿದ್ದಾರೆ.

ಗಾಯಗೊಂಡ ಸ್ಥಿತಿಯಲ್ಲಿ ಇಬ್ಬರನ್ನೂ ತಕ್ಷಣ ನರಗುಂದ ಆಸ್ಪತ್ರೆಗೆ ದಾಖಲಿಸಲಾದರೂ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ.

ಘಟನಾ ಸ್ಥಳಕ್ಕೆ ನರಗುಂದ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಈ ಕುರಿತು ನರಗುಂದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕೇಂದ್ರ ಬಜೆಟ್ ಮಹತ್ವದ ಹೆಜ್ಜೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಆದಾಯ ತೆರಿಗೆ, ಶಿಕ್ಷಣ, ಆರೋಗ್ಯ, ಮಹಿಳಾ ಸಬಲೀಕರಣ, ಕ್ರೀಡಾ ಹಾಗೂ ಮೂಲಸೌಕರ್ಯ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಮಹತ್ವದ ಘೋಷಣೆಗಳನ್ನು ಮಾಡಿದ್ದಾರೆ ಎಂದು ಕ್ರಾಂತಿಸೂರ್ಯ ಜೈಭೀಮ್ ಸೇನೆಯ ರಾಜ್ಯಾಧ್ಯಕ್ಷ ಮಂಜುನಾಥ ಎಸ್. ರಾಠೋಡ ಅಭಿಪ್ರಾಯಪಟ್ಟಿದ್ದಾರೆ.



ಆರೋಗ್ಯ ಮತ್ತು ವಿದ್ಯಾಭ್ಯಾಸಕ್ಕೆ ಸಂಬಂಧಿಸಿದ ಟಿಸಿಎಸ್ ದರವನ್ನು ಶೇ. 5ರಿಂದ ಶೇ. 2ಕ್ಕೆ ಇಳಿಸಿರುವುದು ಮಧ್ಯಮ ಹಾಗೂ ಬಡ ವರ್ಗದ ಜನರಿಗೆ ಮಹತ್ವದ ನಿರ್ಣಯವಾಗಿದೆ. ವಿದೇಶ ಯಾತ್ರೆಗಳ ಮೇಲಿನ ಟಿಸಿಎಸ್ ಕಡಿತ, ಅನಿವಾಸಿ ಭಾರತೀಯರ ಸ್ಥಿರಾಸ್ತಿಗೆ ಸಂಬಂಧಿಸಿದ ಟಿಡಿಎಸ್ ಸರಳೀಕರಣ ಹೂಡಿಕೆ ಉತ್ತೇಜನಕ್ಕೆ ಸಹಕಾರಿ ಆಗಲಿದೆ.

ಆದಾಯ ತೆರಿಗೆ ನಿಯಮಗಳ ಸರಳೀಕರಣ, ಫಾರ್ಮ್‌ಗಳ ಸುಲಭೀಕರಣ, ಸಣ್ಣ ತೆರಿಗೆ ಪಾವತಿದಾರರಿಗೆ ಹೊಸ ವ್ಯವಸ್ಥೆ, ಅಪಘಾತ ವಿಮೆ ಪರಿಹಾರಕ್ಕೆ ತೆರಿಗೆ ವಿನಾಯಿತಿ ಮತ್ತು ವಿದೇಶಿ ಆಸ್ತಿ ಘೋಷಣೆಗೆ ಆರು ತಿಂಗಳ ಸಮಯಾವಕಾಶ ನೀಡಿರುವುದು ಜನಪರ ನಿರ್ಧಾರಗಳಾಗಿವೆ.

ಶಿಕ್ಷಣ ಕ್ಷೇತ್ರದಲ್ಲಿ ಎಲ್ಲಾ ರಾಜ್ಯಗಳಿಗೆ ಯುನಿವರ್ಸಿಟಿ ಟೌನ್‌ಶಿಪ್‌ಗಳು, ಪ್ರತೀ ಜಿಲ್ಲೆಗೆ ವಿದ್ಯಾರ್ಥಿನಿ ನಿಲಯ, ಸ್ಕಿಲ್ ಸೆಂಟರ್‌ಗಳ ನಿರ್ಮಾಣ, ರಾಷ್ಟ್ರೀಯ ಹಾಸ್ಪಿಟಾಲಿಟಿ ಸಂಸ್ಥೆಯ ಸ್ಥಾಪನೆ, ಈಶಾನ್ಯ ಭಾರತದಲ್ಲಿ ಏಮ್ಸ್ ಆಸ್ಪತ್ರೆ ನಿರ್ಮಾಣ ಘೋಷಣೆಗಳು ಭವಿಷ್ಯದ ಭಾರತ ನಿರ್ಮಾಣಕ್ಕೆ ದಾರಿ ತೋರಿಸುತ್ತವೆ.

ಒಟ್ಟಾರೆ, ಈ ಘೋಷಣೆಗಳು ಸಾಮಾಜಿಕ ನ್ಯಾಯ, ಶಿಕ್ಷಣ, ಮಹಿಳಾ ಸಬಲೀಕರಣ ಮತ್ತು ಸಮಗ್ರ ಅಭಿವೃದ್ಧಿಗೆ ಪೂರಕವಾಗಿದೆ ಎಂದು ತಿಳಿಸಿದ್ದಾರೆ.

**116ನೇ ವರ್ಷದ ಶ್ರೀ ಗುರು ಪ್ರತಿಪದೆಯ ಕೊನೆಯ ದಿನದ ಕಾರ್ಯಕ್ರಮದಲ್ಲಿ ಡಿ.ಆರ್. ಪಾಟೀಲ**

# ಭಗವಂತನ ಪ್ರೇರಣೆಯಿಂದಲೇ ಜಗತ್ತು ನಡೆಯುತ್ತಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಈ ಜಗತ್ತು ನಡೆದಿರುವುದೇ ಭಗವಂತನ ಪ್ರೇರಣೆಯಿಂದ. ಅವನ ಪ್ರೇರಣೆಯಿಲ್ಲದೆ ಒಂದು ಹುಲ್ಲು ಕಡ್ಡಿಯೂ ಸಹ ಅಲುಗಾಡುವುದಿಲ್ಲ ಎಂಬುದು ಎಲ್ಲರಿಗೂ ಗೊತ್ತಿರುವ ವಿಚಾರ. ಅದರಲ್ಲಿಯೂ ಶ್ರೀ ದತ್ತಾತ್ರೇಯ ಈ ಜಗತ್ತಿನ ಮಹಾಗುರುವಾಗಿದ್ದಾನೆ. ಅವನ ಆಶೀರ್ವಾದ ಪಡೆದವರೆಲ್ಲರೂ ಧನ್ಯರು ಎಂದು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದಿರುವ 116ನೇ ವರ್ಷದ ಶ್ರೀ ಗುರು ಪ್ರತಿಪದೆಯ ಕೊನೆಯ ದಿನ ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತರ ಸನ್ಮಾನ ನೆರವೇರಿಸಿ ಅವರು ಮಾತನಾಡಿದರು.

ಈ ಜಗತ್ತಿನಲ್ಲಿ ಬದುಕಿರುವ ನಮಗೆ ಆಯುಷ್ಯದ ಭರವಸೆ ಇಲ್ಲ. ಇರುವಷ್ಟು ದಿನ ಎಲ್ಲರೊಳಗೊಂದಾಗಿ ಬಾಳುವುದನ್ನು ಕಲಿಯಬೇಕು.




ಯಾವಾಗಲೂ ಸತ್ಸಂಗದಲ್ಲಿ ಕಾಲ ಕಳೆಯುವದರಿಂದ ಅಂತಹ ಗುಣ ನಮ್ಮಲ್ಲಿ ಬರುತ್ತದೆ. ನರೇಗಲ್ಲದಂತಹ ಚಿಕ್ಕ ಪಟ್ಟಣದಲ್ಲಿ ಚಿಕ್ಕ ಸಮುದಾಯವಾಗಿರುವ ಬ್ರಾಹ್ಮಣ ಸಮುದಾಯದವರು ಕೈಗೊಳ್ಳುವ ಧಾರ್ಮಿಕ ಕಾರ್ಯಗಳನ್ನು ಕಂಡು ನನಗೆ ಅಚ್ಚರಿ ಮತ್ತು ಆನಂದವಾಗಿದೆ. ಇದು ಇತರೆ ಎಲ್ಲರಿಗೂ ಮಾದರಿಯಾಗಿದೆ. ಇಲ್ಲಿನ ಬಹುತೇಕ ಕಾರ್ಯಕ್ರಮಗಳಲ್ಲಿ ನಾನು ಪಾಲ್ಗೊಂಡು ಶ್ರೀ ಗುರು ದತ್ತಾತ್ರೇಯನ ಆಶೀರ್ವಾದ ಪಡೆದಿದ್ದೇನೆ. ಸದ್ಗುರು ಶ್ರೀ ಬ್ರಹ್ಮಚೈತನ್ಯ ಮಹಾರಾಜರು ಮತ್ತು ಸದ್ಗುರು ಶ್ರೀ ಬ್ರಹ್ಮಾನಂದ ಮಹಾರಾಜರು ನಮ್ಮ ಮನೆಯಲ್ಲಿದ್ದು ಹೋಗಿರುವದರಿಂದ ನಮ್ಮಲ್ಲಿ ಧಾರ್ಮಿಕ ಭಾವನೆ ಜಾಗೃತವಾಗಿದೆ ಎಂದು ಅಭಿಪ್ರಾಯಪಟ್ಟರು.

ಅಖಿಲ ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಸದಸ್ಯ ಗುರಣ್ಣ ಬಳಗಾನೂರ ಮಾತನಾಡಿ, ಇಂದು ಇಲ್ಲಿ ಪ್ರತಿಭಾ ಪುರಸ್ಕಾರ ಪಡೆದವರು ಭವಿಷ್ಯದಲ್ಲಿ ಉತ್ತಮ ಜೀವನವನ್ನು ರೂಪಿಸಿಕೊಳ್ಳಲಿ. ನಿವೃತ್ತರಾದವರ ಜೀವನ ಸುಖಮಯವಾಗಿರಲಿ. ನಾನೂ ಸಹ ಡಿ.ಆರ್. ಪಾಟೀಲರೊಂದಿಗೆ ಹಲವಾರು ಬಾರಿ ಬಂದು ಶ್ರೀ ದತ್ತನ ಆಶೀರ್ವಾದ ಪಡೆದುಕೊಂಡಿದ್ದೇನೆ ಮತ್ತು ಅನೇಕ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಂಡಿದ್ದೇನೆ. ಇಲ್ಲಿನ ಧಾರ್ಮಿಕ ಕಾರ್ಯಕ್ರಮಗಳು ತುಂಬಾ ಅಚ್ಚುಕಟ್ಟಾಗಿ ನಡೆಯುತ್ತವೆ ಎಂದರು.

ಗಜೇಂದ್ರಗಡ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಮಾತನಾಡಿ, ಬೇಡಿದವರಿಗೆ ಬೇಡಿದ್ದನ್ನು ನೀಡುವ ದೇವರು ಎಂದೇ ದತ್ತಾತ್ರೇಯ ಪ್ರಸಿದ್ಧನಾಗಿದ್ದಾನೆ. ಜಾತಿ-ಮತ-ಪಂಥಗಳ ಗೊಡವೆ ಇಲ್ಲದೆ ಎಲ್ಲರಿಗೂ ಒಳ್ಳೆಯದನ್ನು ಮಾಡುವ ಶ್ರೀ ದತ್ತನ ಆಶೀರ್ವಾದ ದೊ-ರೆತದ್ದು ನನಗೂ ಸಂತಸವೆನಿಸಿದೆ ಎಂದರು.

ಸಾನ್ನಿಧ್ಯ ವಹಿಸಿದ್ದ ವೇ. ಬ್ರ. ಶ್ರೀ ಭುಜಂಗಶರ್ಮಾ ಜೋಷಿಯವರು ಆಶೀರ್ವಚನ ನೀಡಿ, ಶ್ರೀ ಗುರು ದತ್ತಾತ್ರೇಯನ ಅವತಾರದ ಬಗ್ಗೆ, ಮಾತೆ ಅನಸೂಯಾಳ ಬಗ್ಗೆ, ಅತ್ರಿ ಮುನಿಗಳ ಬಗ್ಗೆ ವಿಶೇಷವಾದ ಮಾಹಿತಿ ನೀಡಿ, ಕಳೆದ 116 ವರ್ಷಗಳಿಂದ 13 ದಿನಗಳ ಉತ್ಸವ ನಡೆದು ಬಂದಿರುವುದು ಅಖಂಡ ಧಾರವಾಡ ಜಿಲ್ಲೆಯಲ್ಲಿ ಇಲ್ಲಿಯೇ. ಆದ್ದರಿಂದ ಇದೊಂದು ಶ್ರೀ ದತ್ತಾತ್ರೇಯನ ಕ್ಷೇತ್ರ ಎಂದರು.

ಎಸ್.ಎಚ್. ಜೋಷಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸೀಮಾ ಕೊಂಡಿ ಪ್ರಾರ್ಥಿಸಿದರು. ಸುನೀಲ ಅಂಬೇಕರ ಸ್ವಾಗತಿಸಿದರು. ಅರುಣ ಕುಲಕರ್ಣಿ ನಿರೂಪಿಸಿದರು. ರಘುನಾಥ ಕೊಂಡಿ ಪ್ರಾಸ್ತಾವಿಕ ನುಡಿಗಳನ್ನಾಡಿದರೆ, ಆದರ್ಶ ಕುಲಕರ್ಣಿ ವಂದಿಸಿದರು.

ಸಭಾ ಕಾರ್ಯಕ್ರಮದ ನಂತರ ಗೋಪಾಲ ಕಾವಲ ನಡೆಯಿತು. ಬಾಲಕರು ಲಡ್ಡುಲಡ್ಡು ತಿಮ್ಮಯ್ಯ ಆಡಿ ಸಂತೋಷಿಸಿದರೆ, ಮಹಿಳೆಯರು, ಮಕ್ಕಳು ಬಗಾಟ ಬಗರಿ ಆಡಿದರು. ಮೇಲಕ್ಕೆ ಕಟ್ಟಿದ್ದ ಮೊಸರು ಗಡಿಗೆಯನ್ನು ಒಡೆಯುವ ಮೂಲಕ 13 ದಿನಗಳಿಂದ ಸಾಗಿ ಬಂದ 116ನೇ ವರ್ಷದ ಶ್ರೀ ಗುರುಪ್ರತಿಪದೆ ಉತ್ಸವಕ್ಕೆ ತೆರೆ ಬಿದ್ದಿತು. ಪೃಥ್ವಿರಾಜ ಕುಲಕರ್ಣಿ ಈ ವರ್ಷದ ಮೊಸರು ಗಡಿಗೆಯನ್ನು ಒಡೆದರು. ವೇ. ಮೂ. ದಿಗಂಬರಶಸ್ತ್ರಿಗಳು ಕುರ್ತಕೋಟಿ ಶ್ರೀ ಕೃಷ್ಣನ ಕಥೆಯ ಕೀರ್ತನೆ ಹೇಳಿದರು.

# ದೇಶದ ಅಭಿವೃದ್ಧಿಯ ಪಯಣಕ್ಕೆ ವೇಗ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಎನ್.ಡಿ.ಎ ಸರ್ಕಾರದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿರುವ 2026-27ನೇ ಸಾಲಿನ ಕೇಂದ್ರ ಬಜೆಟ್ ಕೇವಲ ಆರ್ಥಿಕ ಪತ್ರವಲ್ಲ, ಅದು ದೇಶದ ಅಭಿವೃದ್ಧಿಯ ಪಯಣಕ್ಕೆ ವೇಗ ನೀಡಿದ ಬಜೆಟ್ ಆಗಿದೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ಹೇಳಿದ್ದಾರೆ.

ಜಾಗತಿಕ ಆರ್ಥಿಕ ಏರಿಳಿತಗಳ ನಡುವೆಯೂ ಭಾರತದ ಆರ್ಥಿಕತೆಯನ್ನು ಸದೃಢವಾಗಿ ಮುನ್ನಡೆಸುತ್ತಿರುವ ಕೇಂದ್ರ ಸರ್ಕಾರದ ಈ ಬಾರಿಯ ಬಜೆಟ್, ದೇಶದ ಪ್ರತಿಯೊಬ್ಬ ಪ್ರಜೆಯ ಆಶೋತ್ತರಗಳನ್ನು ಈಡೇರಿಸುವ ವಿಶ್ವಾಸ ಮೂಡಿಸಿದೆ. ಇದು ದೇಶದ



ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ಪ್ರಧಾನಿ ಮೋದಿ ಸರ್ಕಾರದ ದೂರದರ್ಶಿತ್ವದ ದಿಕ್ಸೂಚಿಯಾಗಿದೆ.

ಯುವಶಕ್ತಿ, ಮೂಲಸೌಕರ್ಯ ಮತ್ತು ಕೃಷಿಗೆ ಆದ್ಯತೆ ನೀಡಲಾಗಿದ್ದು, ಈ ಬಜೆಟ್‌ನಲ್ಲಿ ನಮ್ಮ ದೇಶದ ಬೆನ್ನೆಲುಬಾದ ಅನ್ನದಾತ ರೈತರಿಗೆ, ದೇಶದ ಶಕ್ತಿಯಾದ ಯುವಜನತೆಗೆ ಮತ್ತು ಮಹಿಳೆಯರ ಸಬಲೀಕರಣಕ್ಕೆ ವಿಶೇಷ ಒತ್ತು ನೀಡಿರುವುದು ಕೃಷಿ ಕ್ಷೇತ್ರದಲ್ಲಿ ಆಧುನಿಕ ತಂತ್ರಜ್ಞಾನದ ಅಳವಡಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಅನುದಾನ, ರಾಜ್ಯದ ರೈತರಿಗೆ ಅನುಕೂಲವಾಗುವಂತೆ ತೆಂಗು, ಗೋಡಂಬಿ ಬೆಳೆಗಾರರಿಗೆ ವಿಶೇಷ ಬೆಂಬಲ ಘೋಷಣೆ ರಾಜ್ಯ ಸೇರಿದಂತೆ ರೈಲ್ವೆ, ಹೆದ್ದಾರಿ ಮತ್ತು ಡಿಜಿಟಲ್ ಮೂಲಸೌಕರ್ಯದ ಮೇಲಿನ ಹೂಡಿಕೆ, ಉತ್ಪಾದನಾ ವಲಯಕ್ಕೆ ಹೊಸ ಚೈತನ್ಯ ನೀಡುವ ವಿಶ್ವಾಸ ಮೂಡಿಸಿದೆ.

ಒಟ್ಟಾರೆಯಾಗಿ, 2026-27ರ ಬಜೆಟ್ ವಿಕಸಿತ ಭಾರತದ ನಿರ್ಮಾಣದ ಸಂಕಲ್ಪವನ್ನು ಪುನರುಚ್ಚರಿಸಿದೆ. ದೇಶದ ಆರ್ಥಿಕತೆಯನ್ನು ವಿಶ್ವದ ಅಗ್ರಮಾನ್ಯ ಸ್ಥಾನಕ್ಕೆ ಏರಿಸುವ ಬದ್ಧತೆ, ಭಾರತೀಯರ ಆಶೋತ್ತರಗಳನ್ನು ಈ ಬಜೆಟ್ ಪ್ರತಿಬಿಂಬಿಸುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೆಳಕಂಡ ವಿವಿಧ ಕೋರ್ಸ್ ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ, ಶುಲ್ಕ ಮರುಪಾವತಿ ಯೋಜನೆಯ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು 15.02.2026 ರ ವರೆಗೆ ವಿಸ್ತರಿಸಲಾಗಿದೆ. https://ssp.postmatric.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಶಿರಡಿ ಸಾಯಿಬಾಬಾ ಸತ್ಸಂಗದ ಸಾಪ್ತಾಹಿಕ ಸಭೆ | ಆರ್.ಆರ್. ಕಾಶಪ್ಪನವರಿಗೆ ಸನ್ಮಾನ**

# ಧರ್ಮದ ಹಾದಿಯಲ್ಲಿ ಮುನ್ನಡೆದರೆ ಯಶಸ್ಸು



■ವಿಜಯಸಾಕ್ಷಿ ಸುದ್ದಿ, ಗದಗ

ಜನಮುಖಿ-ಸಮಾಜ ಮುಖಿಯಾಗಿ ಕಾರ್ಯ ಮಾಡುವ ಸತ್ಯ, ಪ್ರಾಮಾಣಿಕತೆಯೊಂದಿಗೆ ಧರ್ಮದ ಹಾದಿಯಲ್ಲಿ ಮುನ್ನಡೆಯುವ ವ್ಯಕ್ತಿ ಜೀವನದಲ್ಲಿ ಯಶಸ್ಸು ಮತ್ತು ಉನ್ನತ ಸ್ಥಾನಮಾನ ಹೊಂದಬಲ್ಲ ಎಂದು ಗದುಗಿನ ಹಿರಿಯ ವೈದ್ಯ ಡಾ. ಎಸ್.ಬಿ. ಶೆಟ್ಟರ ಅಭಿಪ್ರಾಯಪಟ್ಟರು.

ಅವರು ನಗರದ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಜರುಗಿದ ಗದಗ-ಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗದ ಸಾಪ್ತಾಹಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಮನುಷ್ಯ ಸಂಘ ಜೀವಿಯಾಗಿರಬೇಕು. ಸತ್ಸಂಗದಲ್ಲಿ ಬದುಕು ನಡೆಸಬೇಕು, ಪರೋಪಕಾರಿಯಾಗಿ ಮಾದರಿ ಜೀವನ ನಡೆಸಬೇಕು. ಆಧುನಿಕತೆಯ ಇಂದಿನ ದಿನಗಳಲ್ಲಿ ಮನುಷ್ಯ ಒತ್ತಡದ ಜೀವನ ನಡೆಸುವಂತಾಗಿದೆ. ಕಾರಣ ನಾವಿಂದು ನಮ್ಮ ಜೀವನ ಶೈಲಿಯಲ್ಲಿ ಬದಲಿಸಿಕೊಳ್ಳುವದು ಅವಶ್ಯವಿದೆ ಎಂದರು.

ಇತ್ತೀಚೆಗೆ ಸೇವಾ ನಿವೃತ್ತಿ ಹೊಂದಿದ ಶಿರಡಿ ಸಾಯಿಬಾಬಾ ಸತ್ಸಂಗದ ನಿಕಟಪೂರ್ವ ಅಧ್ಯಕ್ಷ ರಾಮಪ್ಪ ರಂಗಪ್ಪ ಕಾಶಪ್ಪನವರ ಸಮಿತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಗದುಗಿನ ಶಿರಡಿ ಸಾಯಿಬಾಬಾ ಮಂದಿರಕ್ಕೆ ಕಾಶಪ್ಪನವರ ಶ್ರದ್ಧಾಭಕ್ತಿಯೊಂದಿಗೆ ಸೇವೆ ಸಲ್ಲಿಸಿದ್ದು, ಜ್ಞಾನ, ಭಕ್ತಿ, ಸ್ನೇಹಜೀವಿಯಾದ ರಾಮಪ್ಪ ಅವರ ನಿವೃತ್ತಿಯ ಬದುಕು ನೆಮ್ಮದಿಯಿಂದ ಸಾಗುವಂತೆ ಬಾಬಾ ಆಶೀರ್ವದಿಸಲಿ ಎಂದು ಡಾ. ಶೆಟ್ಟರ ಹೇಳಿದರು.

ಆರ್.ಆರ್. ಕಾಶಪ್ಪನವರ ಸತ್ಸಂಗ ಸಮಿತಿಗೆ ಕೃತಜ್ಞತೆ ಸಲ್ಲಿಸಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸತ್ಸಂಗದ ಅಧ್ಯಕ್ಷ ಮಹೇಶಗೌಡ ತಲೇಗೌಡ್ರ ಕಾಶಪ್ಪನವರ ಸೇವೆ ಮತ್ತು ವ್ಯಕ್ತಿತ್ವವನ್ನು ಬಣ್ಣಿಸಿದರು.

ಸತ್ಸಂಗದ ಕಾರ್ಯದರ್ಶಿ ಅಮೃತ ವಾಲಿ ಸ್ವಾಗತಿಸಿ ನಿರೂಪಿಸಿದರು. ಹಿರಿಯ ವೈದ್ಯರಾದ ಡಾ. ಎಸ್.ಡಿ. ಯರಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಶಿಕಾಂತ ಅರಳಿ ವಂದಿಸಿದರು. ಸಮಾರಂಭದಲ್ಲಿ ವ್ಹಿ.ಆರ್. ಕುಂಬಾರ, ಉಮೇಶ ನಾಲ್ವಾಡ, ಸಿದ್ಧಮಲ್ಲಪ್ಪ ಹಾವೇರಿ, ದೀಪಕ ಸುಲಾಖೆ, ರಘುವೀರ ಪತ್ತೇಪೂರ, ಸುಶೀಲಾ ಕೋಟಿ, ಸಿದ್ಧಲಿಂಗಪ್ಪ ಪಟ್ಟಣಶೆಟ್ಟಿ, ಸಿದ್ಧಣ್ಣ ಗೌರೀಪುರ, ಆರ್.ಜಿ. ಕೋಟಿ, ಯಲ್ಲೋಸಾ ಹಬೀಬ, ರವಿಪ್ರಕಾಶ ರೆಡ್ಡಿ, ಇಂಜಿನಿಯರ್ ವೈ.ಎನ್. ಗೌಡರ, ಬಸನಗೌಡ ಗೌಡರ, ಚನ್ನಯ್ಯ ಹಿರೇಮಠ ಸೇರಿದಂತೆ ಶಿರಡಿ ಸಾಯಿಬಾಬಾ ಸದ್ಭಕ್ತರು, ಕಾಶಪ್ಪನವರ ಕುಟುಂಬದವರು ಪಾಲ್ಗೊಂಡಿದ್ದರು.

# ಕಪ್ಪತಗುಡ್ಡದ ಗುಹೆಗಳಲ್ಲಿ ಥಳಥಳ ಹೊಳೆಯುವ ಚಿನ್ನ..!



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಶಾಕಿಂಗ್ ಎಕ್ಸ್‌ಕ್ಲೂಸಿವ್ ವರದಿ ಹೊರಬಿದ್ದಿದೆ. ಜಿಲ್ಲೆಯ ಶಿರಹಟ್ಟಿ ತಾಲೂಕಿನ ಜಲ್ಲಿಗೇರಿ ಹಾಗೂ ಮಹಾಲಿಂಗಪುರ ಗ್ರಾಮದ ನಡುವಿನ ಕಪ್ಪತಗುಡ್ಡದ ಒಳಗಿನ ಗುಹೆಗಳಲ್ಲಿ ಮತ್ತಷ್ಟು ಚಿನ್ನದ ನಿಕ್ಷೇಪಗಳು ಕ್ಯಾಮೆರಾದಲ್ಲಿ ಸೆರೆಗೊಂಡಿವೆ.

ಭಯಂಕರ ನಿಕ್ಷೇಪ ಹೊಂದಿರುವ ಈ ಗುಹೆಗಳೊಳಗೆ ರಿಯಾಲಿಟಿ ಚೆಕ್ ನಡೆಸಲಾಗಿದ್ದು, ಪ್ರಾಣದ ಹಂಗು ತೊರೆದು ರಿಯಲ್ ಚಿನ್ನದ ಹುಡುಕಾಟ ಮಾಡಲಾಗಿದೆ.

ಗುಹೆಯೊಳಗೆ ಪ್ರವೇಶಿಸಿದಂತೆ ನಾಲ್ಕೈದು ದಿಕ್ಕುಗಳಲ್ಲಿ ಕವಲೊಡೆಯುವ ಸುರಂಗಗಳಿದ್ದು, ಅಲ್ಲಲ್ಲಿ ಕಲ್ಲಿನ ಮಧ್ಯೆ ಥಳಥಳ ಹೊಳೆಯುವ ಚಿನ್ನದ ನಿಕ್ಷೇಪಗಳು ಸ್ಪಷ್ಟವಾಗಿ ಕಾಣುತ್ತವೆ.

ಸ್ಥಳೀಯ ಮೂಲಗಳ ಮಾಹಿತಿ ಪ್ರಕಾರ, ಬ್ರಿಟಿಷರ ಕಾಲದಲ್ಲೇ ಈ ಪ್ರದೇಶದಲ್ಲಿ ಚಿನ್ನ ತೆಗೆದಿರುವ ದಾಖಲೆಗಳಿವೆ. ಚಿನ್ನ ಇರುವುದನ್ನು ಗುರುತಿಸಿದ ಫಿರಂಗಿಗಳು ಎರಡು-ಮೂರು ಕಿಲೋಮೀಟರ್ ಒಳಗೆ ಗುಹೆಗಳನ್ನು ನಿರ್ಮಿಸಿ ಚಿನ್ನ ದೋಚಿದರಂತೆ. ಇಂದಿಗೂ ಕಪ್ಪತಗುಡ್ಡದ ಮೇಲೆ ಹಲವು ಕಂಪನಿಗಳ ಕಣ್ಣು ಬಿದ್ದಿದೆ. ಆದರೆ ಪರಿಸರವಾದಿಗಳ ತೀವ್ರ ವಿರೋಧದಿಂದಾಗಿ ಈ ಚಿನ್ನದ ಗಣಿಗಳು ರಕ್ಷಣೆಗೊಳಗಾಗಿವೆ. ಸದ್ಯ ಗುಹೆಗಳೊಳಗೆ ಪ್ರವೇಶಿಸಿ ಚಿನ್ನ ವೀಕ್ಷಿಸುವುದಕ್ಕೂ ಸಂಪೂರ್ಣ ನಿಷೇಧ ವಿಧಿಸಲಾಗಿದೆ.

ಕ್ಯಾಮೆರಾದಲ್ಲಿ ಸೆರೆಗೊಂಡ ಈ ದೃಶ್ಯಗಳು, ಗದಗ ಜಿಲ್ಲೆಯೊಳಗೆ ಅಡಗಿರುವ ಅಮೂಲ್ಯ ಸಂಪತ್ತಿನ ಮತ್ತೊಂದು ಭಯಾನಕ ಸತ್ಯವನ್ನು ಬಿಚ್ಚಿಟ್ಟಿವೆ.



# ರತ್ನಾ ಎಫ್.ಶಿಂಗಾಡಿಯವರಿಗೆ 'ಆದರ್ಶ ಉಪಾಧ್ಯಾಯ' ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಬಸವೇಶ್ವರ ನಗರದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ. 4ರಲ್ಲಿ ಸಹ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ರತ್ನಾ ಕುಮಾರಿ ಎಫ್.ಶಿಂಗಾಡಿಯವರಿಗೆ ರಾಜ್ಯ ಮಟ್ಟದ ಆದರ್ಶ ಉಪಾಧ್ಯಾಯರು ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಲಬುರ್ಗಿ ರಂಗಮಂದಿರದಲ್ಲಿ ಆಧುನಿಕ ಭಾರತದ ಅಕ್ಷರದ ಅವ್ವ ಸಾವಿತ್ರಿ ಬಾಯಿ ಫುಲೆ, ಮುಸ್ಲಿಮ್ ಧರ್ಮದ ಮೊದಲ ಶಿಕ್ಷಕಿ ಫಾತಿಮಾ ಶೇಖ್ ಅವರ ಜನ್ಮ ದಿನಾಚರಣೆಯ ನಿಮಿತ್ತ ಸಮಗ್ರ ಕರ್ನಾಟಕ ಉಪಾಧ್ಯಾಯರ ಪ್ರಗತಿಪರ ಸಂಘದ ಆಶ್ರಯದಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಪ್ರಶಸ್ತಿ ವಿತರಿಸಲಾಯಿತು.

ಫಾದರ್ ಜೋಸೆಫ್ ಸಾನ್ನಿಧ್ಯದಲ್ಲಿ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿ ಡಾ. ದಾಕ್ಷಾಯಿಣಿ ಎಸ್.ಅಪ್ಪ, ಶಾಸಕರಾದ ಅಲ್ಲಮಪ್ರಭು ಪಾಟೀಲ್, ಡಾ. ಅಜಯ್ ಸಿಂಗ್, ಬಸವರಾಜ್ ಜೆ. ಮತ್ತಿಮೂಡ, ಮಹಾಪೌರರಾದ ವರ್ಷಾ ಆರ್. ಜಾನೆ, ರಾಜ್ಯಾಧ್ಯಕ್ಷ ಗುರುಪಾದ ಕೂಗನೂರ್, ಕೋಶಾಧ್ಯಕ್ಷ ಝುಕೀರ್ ಹುಸೇನ್ ಕೂಪನೂರ್ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶಿಕ್ಷಕಿ ರತ್ನಾ ಅವರ ಸೇವೆ ಸ್ಮರಿಸಿ ಶುಭ ಕೋರಿದರು.

# ಆರೋಗ್ಯ, ಶೈಕ್ಷಣಿಕ ಆಯವ್ಯಯ

■ವಿಜಯಸಾಕ್ಷಿ ಸುದ್ದಿ, ಡಂಬಳ

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ 2026ರ ಆಯವ್ಯಯದಲ್ಲಿ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಕ್ಕೆ ಹೊಸ ಆಯಾಮವನ್ನು ನೀಡಲಾಗಿದೆ ಎಂದು ಅರ್ಥಶಾಸ್ತ್ರ ಉಪನ್ಯಾಸಕ ಡಾ. ವಿರೂಪಾಕ್ಷಪ್ಪ ಮುಳಗುಂದ ಅಭಿಪ್ರಾಯಪಟ್ಟಿದ್ದಾರೆ.

3 ಹೊಸ ಏಮ್ಸ್ ಆಸ್ಪತ್ರೆಗಳನ್ನು



ಸ್ಥಾಪಿಸುವದು ಸೇರಿದಂತೆ ಯುವಕರಿಗೆ ಮತ್ತು ಹೆಣ್ಣುಮಕ್ಕಳಿಗೆ ಕೌಶಲ್ಯ ಮತ್ತು ಉನ್ನತ ಶಿಕ್ಷಣಕ್ಕೆ ಮಹತ್ವ ನೀಡಲಾಗಿದೆ. ಜೊತೆಗೆ ಜಿಲ್ಲೆಗೊಂದು ಬಾಲಕಿಯರ ವಸತಿ ನಿಲಯ ನಿರ್ಮಾಣ, ಹೈ ಸ್ಪೀಡ್ ರೈಲ್ವೆ ಕಾರಿಡಾರ್ ನಿರ್ಮಾಣ, ಮೂಲಭೂತ ಸೌಕರ್ಯಗಳಿಗೆ ಹೆಚ್ಚಿನ ಒತ್ತು ನೀಡಲಾಗಿರುವುದು ಪ್ರಶಂಸನೀಯ ಎಂದಿದ್ದಾರೆ.

## ನಿಧನ

### ಚಂದ್ರಶೇಖರಪ್ಪ ಸುಂಕದ



**ರೋಣ:** ಪಟ್ಟಣದ ಹಿರಿಯ ಗಣ್ಯ ವರ್ತಕರಾದ ಚಂದ್ರಶೇಖರಪ್ಪ ಕ.ಸುಂಕದ (91) ಪಟ್ಟಣದ ತಮ್ಮ ಸ್ವಗೃಹದಲ್ಲಿ ನಿಧನರಾದರು. ಮೃತರು ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಳಗವನ್ನು ಅಗಲಿದ್ದಾರೆ.

**ಸಂತಾಪ:** ಗುಲಗಂಜಿ ಮಠದ ಗುರುಪಾದ ದೇವರು, ಮಾಜಿ ಸಂಸದ ಆರ್.ಎಸ್. ಪಾಟೀಲ, ಶಾಸಕ ಜಿ.ಎಸ್. ಪಾಟೀಲ, ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಡಾ. ಎಸ್.ಬಿ. ಲಕ್ಕೋಳ, ಮುಖಂಡರಾದ ಬಸವರಾಜ ನವಲಗುಂದ, ಮುತ್ತಣ್ಣ ಸಂಗಳದ, ತೋಟಪ್ಪ ನವಲಗುಂದ, ಯೂಸುಪ್ ಇಟಗಿ, ರಾಜಣ್ಣ ಗಿರಡ್ಡಿ, ವಿ.ಬಿ. ಸೋಮನಕಟ್ಟಿಮಠ, ಆನಂದ ಚಂಗಳಿ, ಸಂಜಯ ದೊಡ್ಡಮನಿ ಸೇರಿದಂತೆ ಪಟ್ಟಣದ ವ್ಯಾಪಾರಸ್ಥರು ಹಾಗೂ ಗಣ್ಯರು ಸಂತಾಪ ಸೂಚಿಸಿದ್ದಾರೆ.

# ಮೊಬೈಲ್, ಟಿವಿಯಿಂದ ಮಕ್ಕಳನ್ನು ದೂರವಿಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ಮೊಬೈಲ್ ಹಾಗೂ ಟಿವಿ ನೋಡುವ ರೂಢಿಯನ್ನು ತಪ್ಪಿಸದಿದ್ದಲ್ಲಿ ಮುಂದೊಂದು ದಿನ ಮಕ್ಕಳ ಭವಿಷ್ಯದ ಮೇಲೆ ಬಹು ದೊಡ್ಡ ಪರಿಣಾಮ ಬೀರುವ ಸಾಧ್ಯತೆಗಳಿದ್ದು, ಪಾಲಕರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸದಿದ್ದರೆ ಪಶ್ಚಾತ್ತಾಪ ಪಡಬೇಕಾದೀತು ಎಂದು ಗದಗ ಐಎಂಎ ನಿಕಟಪೂರ್ವ ಅಧ್ಯಕ್ಷೆ, ಹಿರಿಯ ವೈದ್ಯೆ ಡಾ. ರಾಧಿಕಾ ಕುಲಕರ್ಣಿ ಹೇಳಿದರು.

ಅವರು ಗದುಗಿನ ಯುರೋ ಕಿಡ್ಸ್ ಪ್ರಿ-ಸ್ಕೂಲ್‌ನ ವಾರ್ಷಿಕ ಸ್ನೇಹ ಸಮ್ಮೇಳನ, ಪಾರಿತೋಷಕ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಪಾಲಕ ಮತ್ತು ಪೋಷಕರು ಮೊಬೈಲ್ ಮತ್ತು ಟಿವಿಯನ್ನು ಸಂಪರ್ಕ ಮತ್ತು ಜ್ಞಾನಕ್ಕಾಗಿ ಅವಶ್ಯ ಮತ್ತು ಅಗತ್ಯವಿದ್ದಾಗ ಮಾತ್ರ ಬಳಕೆ ಮಾಡುವದನ್ನು ರೂಢಿಸಿಕೊಳ್ಳಬೇಕು. ಸಣ್ಣ ಮಕ್ಕಳಿಗೆ ಮೊಬೈಲ್ ನೋಡಲು ಕೊಡುವದರಿಂದ ಕಾಲಕ್ರಮೇಣ ಮಕ್ಕಳನ್ನು ಅದನ್ನು



ಚಟವಾಗಿಸಿಕೊಳ್ಳುತ್ತಾರೆ. ಇದು ಮಕ್ಕಳ ಆರೋಗ್ಯ, ಬೆಳವಣಿಗೆ, ಭವಿಷ್ಯದ ಮೇಲೆ ಪರಿಣಾಮ ಬೀರುವುದಲ್ಲದೆ, ಊಟ, ನಿದ್ದೆ, ಕಲಿಕೆ ಬಗ್ಗೆ ಆಸಕ್ತಿ ಇಲ್ಲದಂತಾಗುತ್ತದೆ ಎಂದರು.

ಯುರೋ ಕಿಡ್ಸ್ ಸ್ಕೂಲ್‌ನ ಅಧ್ಯಕ್ಷರಾದ ಹಿರಿಯ ವೈದ್ಯ ಡಾ. ಹನಮಂತ ಮಾಳಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಅಲ್ಪ ಅವಧಿಯಲ್ಲಿ ನಮ್ಮ ಶಾಲೆ ಪಾಲಕ-ಪೋಷಕರ ಮೆಚ್ಚುಗೆಗೆ ಪಾತ್ರವಾಗಿ ಪ್ರಗತಿಯಲ್ಲಿ ಮುನ್ನಡೆದಿದ್ದು, ಬರಲಿರುವ ದಿನಗಳಲ್ಲಿ ಇನ್ನೂ ಉತ್ತಮ ರೀತಿಯ ಸೇವೆಗೆ ಸನ್ನದ್ಧಗೊಳ್ಳಲಿದೆ ಎಂದರು.

ಮುಖ್ಯ ಅತಿಥಿ ಡಾ. ರೇಣುಕಾ ಬಿನ್ನಾಳ ಮಾತನಾಡಿದರು. ಕಾರ್ಯದರ್ಶಿ ಡಾ.ಅರುಣಾ ಮಾಳಿ ವಾರ್ಷಿಕ ವರದಿ ವಾಚಿಸಿದರು, ವಿನ್ಸಂಟ್ ಪಾಟೀಲ ನಿರೂಪಿಸಿದರು. ಶ್ರೇಯಾ ಮಾಳಿ ವಂದಿಸಿದರು.

ಸಮಾರಂಭದಲ್ಲಿ ಡಾ. ಶ್ವೇತಾ ಸಂಕನೂರ, ಊರ್ಮಿಳಾ ಗುರುಪ್ರಸಾದ, ಮಾರುತಿ ಮಾಳಿ, ಶಿವಾನಂದ ಮಾಳಿ, ಮಮತಾ ಪಾಟೀಲ, ಅನಂತ ಪಾಟೀಲ ಸೇರಿದಂತೆ ವಿದ್ಯಾರ್ಥಿಗಳು, ಪಾಲಕರು ಉಪಸ್ಥಿತರಿದ್ದರು.

# ವಿದ್ಯುತ್ ಶಾರ್ಟ್ ಸರ್ಕ್ಯೂಟ್; ಬೆಳೆ ಹಾನಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸವಣೂರ ರಸ್ತೆ ಪಕ್ಕದ ಜಮೀನಿನಲ್ಲಿ ರೈತರಾದ ದೇವಪ್ಪ ಮಲ್ಲಪ್ಪ ಬಸಾಪುರ ಎಂಬುವರಿಗೆ ಸೇರಿದ ಶೇಂಗಾ, ಕಡಲೆ, ಗೋವಿನಜೋಳದ ಹೊಟ್ಟಿನ ಬಣವೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಸುಟ್ಟು ಕರಕಲಾಗಿವೆ.

ಸುದ್ದಿ ತಿಳಿದು ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ಆರಿಸುವ ಮೂಲಕ ಹೆಚ್ಚಿನ ಹಾನಿ ತಪ್ಪಿಸಿದ್ದಾರೆ.

1 ಲಕ್ಷ ರೂ ಮೌಲ್ಯದ ಹೊಟ್ಟು ಹಾನಿಯಾಗಿದ್ದು, ರೈತ ಚಿಂತೆಗೀಡಾಗಿದ್ದಾರೆ.

ಅಗ್ನಿ ಶಾಮಕ ಠಾಣಾಧಿಕಾರಿ ಬಿ.ಎಂ. ಮರಟಗೇರಿ, ಸಿಬ್ಬಂದಿಗಳಾದ ಜಗದೀಶ ತಳವಾರ, ಬಾಬಣ್ಣ ಲಮಾಣಿ, ಕೃಷ್ಣ ರಾಠೋಡ ಬೆಂಕಿ ಆರಿಸುವ ಕಾರ್ಯ ಮಾಡಿದರು. ಸ್ಥಳಕ್ಕೆ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದ್ದಾರೆ.



# ಇಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವೂ ಫೆಬ್ರುವರಿ 10ರಂದು ಆಚರಿಸಲಾಗುವ ಕಾಯಕ ಶರಣರ ಜಯಂತಿ ನಿಮಿತ್ತ ಫೆಬ್ರವರಿ 04 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಹಾಗೂ ಫೆಬ್ರವರಿ 15ರಂದು ಆಚರಿಸಲಾಗುವ ಸಂತ ಸೇವಾಲಾಲ್ ಜಯಂತಿ ನಿಮಿತ್ತ ಫೆಬ್ರವರಿ 04 ರಂದು ಬುಧವಾರ ಮುಂಜಾನೆ 11:30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ವ್ಹಿ.ಬಳ್ಳಾರಿ ತಿಳಿಸಿದ್ದಾರೆ.

### ಕಸಾಪ ವತಿಯಿಂದ ಡಾ. ಬಸವರಾಜ ಮುಗಳಿ ದತ್ತಿ ಉಪನ್ಯಾಸ ಕಾರ್ಯಕ್ರಮ

# ಕನ್ನಡ ಸಾಹಿತ್ಯವನ್ನು ಸಮೃದ್ಧಗೊಳಿಸುವುದು ನಮ್ಮ ಕರ್ತವ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಭಾಷೆಗೆ ಎರಡು ಸಾವಿರ ವರ್ಷಗಳ ಇತಿಹಾಸವಿದೆ. ಹಳಗನ್ನಡ, ನಡುಗನ್ನಡ ಮತ್ತು ಹೊಸಗನ್ನಡ ಕಾಲಘಟ್ಟದಲ್ಲಿ ಆಯಾ ಕವಿಗಳು ಅಮೂಲ್ಯ ಕೃತಿ ರಚನೆಯ ಮೂಲಕ ಕನ್ನಡದ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಕನ್ನಡ ಸಾಹಿತ್ಯದ ಬೆಳವಣಿಗೆಗೆ ಗದಗ ಪರಿಸರದ ಕವಿಗಳ ಕೊಡುಗೆ ಅಪಾರವಾದುದು ಎಂದು ನಿವೃತ್ತ ಪ್ರಾಚಾರ್ಯ ಬಸವರಾಜ ಜಾಲಿಹಾಳ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಡಾ. ಬಸವರಾಜ ಮುಗಳಿ ಅವರ ಸ್ಮರಣಾರ್ಥ ಜರುಗಿದ ದತ್ತಿ ಉಪನ್ಯಾಸದಲ್ಲಿ ಕನ್ನಡ ಸಾಹಿತ್ಯದ ಬೆಳವಣಿಗೆ ಕುರಿತು ಮಾತನಾಡಿದರು.

12ನೇ ಶತಮಾನದಲ್ಲಿ ಶರಣರು ಜನರಾಡುವ ಭಾಷೆಯಲ್ಲಿ ವಚನಗಳನ್ನು ರಚಿಸಿ ಕನ್ನಡದ ಕಳೆಯನ್ನು ಹೆಚ್ಚಿಸಿದರು. ಜೈನ ಸಾಹಿತ್ಯ, ವಚನ ಸಾಹಿತ್ಯ, ದಾಸ ಸಾಹಿತ್ಯ, ನವೋದಯ, ನವ್ಯ, ಪ್ರಗತಿಶೀಲ, ಬಂಡಾಯ ಸಾಹಿತ್ಯದವರೆಗೆ ಕನ್ನಡ ಸಾಹಿತ್ಯ ಸಮೃದ್ಧವಾಗಿ ಬೆಳೆದು ಬಂದಿದೆ. ಚಂಪೂ ಶೈಲಿಯಿಂದ ಹಿಡಿದು ಆಧುನಿಕ ಗದ್ಯ, ಪದ್ಯ, ನಾಟಕದ ವರೆಗಿನ ಬೆಳವಣಿಗೆಯಿಂದ ಕನ್ನಡಿಗರು ಹೆಮ್ಮೆಪಡುವಂತಾಗಿದೆ. ನಮ್ಮ ಸಾಹಿತ್ಯ ಪರಂಪರೆಯನ್ನು ಅಧ್ಯಯನ ಮಾಡಿ, ಇನ್ನಷ್ಟು ಸಮೃದ್ಧಗೊಳಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದು ತಿಳಿಸಿದರು.

ದತ್ತಿ ದಾನಿಗಳಾದ ದಿಲೀಪಕುಮಾರ ಮುಗಳಿ ಮಾತನಾಡಿ, ಕನ್ನಡಿಗರು ನಮ್ಮ ಭಾಷೆ, ಸಂಸ್ಕೃತಿಯ ಬಗ್ಗೆ ಅಭಿಮಾನವನ್ನು ಹೊಂದಬೇಕು. ಇಂಗ್ಲೀಷಿನ ವ್ಯಾಮೋಹದಿಂದ ಹೊರಬಂದು ದೇಸಿತನವನ್ನು ಉಳಿಸಿಕೊಂಡು ಬೆಳೆಯಬೇಕಾದುದು ಇಂದಿನ ಅಗತ್ಯವಾಗಿದೆ. ಕನ್ನಡ ಸಾಹಿತ್ಯ ಪರಿಷತ್ತು ತನ್ನ ಕಾರ್ಯಕ್ರಮಗಳ ಮೂಲಕ ಸಾಹಿತ್ಯ, ಸಂಸ್ಕೃತಿಯ ಸಂವರ್ಧನೆಗೆ ಕಾರ್ಯ ಮಾಡುತ್ತಿರುವದು ಹೆಮ್ಮೆಯ ಸಂಗತಿಯಾಗಿದೆ ಎಂದು ತಿಳಿಸಿದರು.

ಸಿ.ಕೆ.ಎಚ್. ಕಡಣಿ ಶಾಸ್ತ್ರಿ ಡಾ. ಬಸವರಾಜ ಮುಗಳಿ ಅವರ ಸಂಸ್ಮರಣೆ ಮಾಡಿ, ವೈದ್ಯರಾಗಿ ಜನಪರ ಸೇವೆಯನ್ನು ಸಲ್ಲಿಸುವದರ ಜೊತೆಗೆ ಸಾಹಿತ್ಯ, ಕ್ರೀಡೆ, ಸಂಘಟನೆಯಲ್ಲೂ ಆಸಕ್ತಿಯನ್ನು ಹೊಂದಿದ್ದರು ಎಂದು ತಿಳಿಸಿದರು.

ದ.ರಾ. ಬೇಂದ್ರೆಯವರ ಜನ್ಮದಿನದ ಅಂಗವಾಗಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ದಿ. ಶಿವಾನಂದ ಗಿಡ್ನಂದಿ ಅವರ ಕುರಿತು ಮಂಜುಳಾ ವೆಂಕಟೇಶಯ್ಯ ಕವನ ವಾಚಿಸಿದರು. ಅಮರೇಶ ರಾಂಪೂರ ಸ್ವಾಗತಿಸಿದರು. ಬಸವರಾಜ ನೆಲಜೇರಿ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಡಾ. ಎಸ್.ಕೆ. ಅವರಡ್ಡಿ, ಡಾ. ಜಿ.ಬಿ. ಪಾಟೀಲ, ರತ್ನಕ್ಕ ಪಾಟೀಲ, ಸತೀಶ ಚನ್ನಪ್ಪಗೌಡ್ರ, ಶೈಲಶ್ರೀ ಕಪ್ಪರದ, ಶಾಮನಗೌಡ ಅಳಗುಂಡಿ, ಜೆ.ಎ. ಪಾಟೀಲ, ಎಂ.ಎನ್. ಕಾಮನಹಳ್ಳಿ, ವೀರಣ್ಣ ಕೊಟಗಿ, ಎಂ.ಎ. ರಡ್ಡೇರ, ಶಂಕ್ರಪ್ಪ ಗಾಂಜಿ, ಕಲ್ಲೇಶ ಮೂರಶಿಳ್ಳಿನ, ಮಲ್ಲಿಕಾರ್ಜುನ ನಿಂಗೋಜಿ, ಸಿ.ಎಂ. ಮಾರನಬಸರಿ, ಎಸ್.ವಿ. ಚೇಗರಡ್ಡಿ, ಶಿವಪ್ಪ ಗುಳಗುಳಿ, ನಾಗಪ್ಪ ಸುರಳಿಕೇರಿ, ಎಸ್.ಎ. ಸೋಮಗೊಂಡ, ಶೈಲಜಾ ಗಿಡ್ನಂದಿ, ರಕ್ಷಿತಾ ಗಿಡ್ನಂದಿ, ಲಕ್ಷ್ಮಿ ಚೇಗರಡ್ಡಿ, ಸೌಮ್ಯ ಬೆಟಗೇರಿ, ನಿರ್ಮಲಾ ಮೇಟಿ, ಪಾರ್ವತಿ ಮುಗಳಿ, ಸೌಮ್ಯ ಮುಗಳಿ, ಗುರುದೇವಿ ಪಾರ್ವತಿಮಠ, ಉಮಾದೇವಿ ಪಾಟೀಲ, ರತ್ನಾ ಪುರಂತರ, ಅಜಿತ ಘೋರ್ಪಡೆ, ಅಶೋಕ ಗಿರಡ್ಡಿ, ಬಿ.ಬಿ. ಅಕ್ಕಿ, ಸುರೇಶ ನಲವಡಿ, ವೀರೇಶ ಪೂಜಾರ, ವಾಯ್.ಕೆ. ಹಂದ್ರಾಳ, ಕೆ.ಎನ್. ಗುಗ್ಗರಿ, ಟಿ.ಎಂ. ದುಂದೂರ, ಮಹೇಶ ಶಟವಾಜಿ, ಎಂ.ಸಿ. ವಗ್ಗಿ ಮೊದಲಾದವರು ಉಪಸ್ಥಿತರಿದ್ದರು.




ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಗದಗ ಪರಿಸರದ ಕವಿಗಳಾದ ಕುಮಾರವ್ಯಾಸ, ಚಾಮರಸ, ನಯಸೇನ, ದುರ್ಗಸಿಂಹ, ಶ್ರೀಧರಾಚಾರ್ಯರಂತಹ ಕವಿಗಳು ತಮ್ಮ ಅಮೂಲ್ಯ ಕೃತಿಗಳ ಮೂಲಕ ಕನ್ನಡವನ್ನು ಉತ್ತುಂಗಕ್ಕೇರಿಸಿದ್ದಾರೆ. ಆಧುನಿಕ ಸಾಹಿತ್ಯ ಬೆಳವಣಿಗೆಗೂ ಇಲ್ಲಿಯ ಲೇಖಕರ ಕೊಡುಗೆ ಮಹತ್ವದ್ದಾಗಿದೆ. ಈ ಪರಿಸರದ ಭಾಷೆಯನ್ನು ದ.ರಾ. ಬೇಂದ್ರೆಯವರು ತಮ್ಮ ಕಾವ್ಯದಲ್ಲಿ ಬಳಸುವ ಮೂಲಕ ದೇಸೀ ಸೊಗಡನ್ನು ಮೆರೆದಿದ್ದಾರೆ ಎಂದು ತಿಳಿಸಿದರು.

### ಗೊಜನೂರಿನಲ್ಲಿ ಸಾಂಸ್ಕೃತಿಕ ಸೌರಭ ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಜಾನಪದ ಕಲೆ ಅವನತಿಯ ಅಂಚಿನಲ್ಲಿದೆ




ಜಿ.ಪಂ ಮಾಜಿ ಸದಸ್ಯ ಎಂ.ಎಸ್. ದೊಡ್ಡಗೌಡರ ಮಾತನಾಡಿ, ಜಾನಪದ ಕಲೆಗಳು ನಮ್ಮ ಪ್ರಾಚೀನ ಪರಂಪರೆಯ ಕೊಂಡಿಗಳಾಗಿವೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ನಮ್ಮ ಜನಪದ ಕಲೆಗಳಿಗೆ ಜೀವ ತುಂಬುವ ಕಾರ್ಯ ಮಾಡುತ್ತಿದೆ. ಇಂತಹ ಜನಪದ ಕಲೆಗಳನ್ನು ಮಕ್ಕಳಿಗೆ ಕಲಿಸುವ ಮೂಲಕ ಪುರಾತನ ಸಂಸ್ಕೃತಿ ಕಾಪಾಡುವ ಕಾರ್ಯ ಮಾಡಬೇಕು ಎಂದು ಹೇಳಿದರು.

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಮ್ಮ ನಾಡಿನ ಹಬ್ಬಗಳು, ಜಾತ್ರೆ, ಕಲೆ, ಸಂಸ್ಕೃತಿ, ಸಂಪ್ರದಾಯಗಳನ್ನು ಮುಂದಿನ ಪೀಳಿಗೆಗೂ ಹೇಳಿಕೊಡುವ ಕಾರ್ಯವನ್ನು ಮಾಡುವುದು ಅಗತ್ಯವಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಸಮೀಪದ ಗೊಜನೂರ ಗ್ರಾಮದ ಬಾಲಲೀಲಾ ಮಹಾಂತ ಶಿವಯೋಗಿಗಳ ಜಾತ್ರಾ ಮಹೋತ್ಸವದ ಅಂಗವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಡೆದ ಸಾಂಸ್ಕೃತಿಕ ಸೌರಭ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಂದು ತಂತ್ರಜ್ಞಾನದ ಪ್ರಭಾವದಿಂದ ಜನಪದ ಕಲೆ, ಸಂಸ್ಕೃತಿಗಳು ಅವನತಿಯ ಅಂಚಿನಲ್ಲಿವೆ. ಡೊಳ್ಳಿನ ಪದಗಳು, ಹಂತಿಯ ಪದಗಳು, ತೊಗಲು ಗೊಂಬೆಯಾಟ, ದೊಡ್ಡಾಟಗಳು, ಪೌರಾಣಿಕ ಕತೆಗಳ ನಾಟಕಗಳು ಸೇರಿದಂತೆ ವಿವಿಧ ಕಲೆ-ಸಂಸ್ಕೃತಿಗಳು ಇಂದು ಆಧುನಿಕತೆಯ ಹೊಡೆತಕ್ಕೆ ಸಿಲುಕಿ ನಶಿಸಿ ಹೋಗುತ್ತಿವೆ. ಇಂತಹ ಜಾತ್ರಾ ಮಹೋತ್ಸವಗಳಲ್ಲಿ ಕಲೆಗಳ ಪ್ರದರ್ಶನ ಏರ್ಪಡಿಸುವ ಮೂಲಕ ಪುರಾತನ ಕಲೆಗಳನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಗ್ರಾ.ಪಂ ಅಧ್ಯಕ್ಷ ಮಂಜುನಾಥ ಚಲವಾದಿ ಹಾಗೂ ಜಾನಪದ ಕಲಾವಿದ ಸಂಕ್ರಣ್ಣ ಸಂಕಣ್ಣವರ ಮಾತನಾಡಿದರು. ಸಭೆಯಲ್ಲಿ ಉಪಾಧ್ಯಕ್ಷ ಮಹಾಂತಗೌಡ ಪಾಟೀಲ, ರಮೇಶ ದನದಮನಿ, ಬಸವರಾಜ ಸಂಶಿ, ಶಂಬುಲಿಂಗಪ್ಪ ಸೊರಟೂರ, ಗಂಗಾಧರ ಮೆಣಸಿನಕಾಯಿ, ಕರಿನಿಂಗಣ್ಣವರ, ಬಸವರಾಜ ದನದಮನಿ ಇದ್ದರು.

ಸಾಂಸ್ಕೃತಿಕ ಸೌರಭ ಕಾರ್ಯಕ್ರಮದಲ್ಲಿ ಆಕಾಶವಾಣಿ ಕಲಾವಿದೆ ಸಾವಿತ್ರಿ ಲಮಾಣಿ ಅಸುಗಮ ಸಂಗೀತದಲ್ಲಿ ಬಸವಣ್ಣನವರ ವಚನ ಹಾಗೂ ಸಂತ ಶಿಶುನಾಳ ಶರೀಫರ ತತ್ವಪದ ಹಾಡಿ ಮನರಂಜಿಸಿದರು. ರಾಚಯ್ಯ ಮುಧೋಳ ಅವರ ಜೋಗತಿ ನೃತ್ಯವು ಸಭೆಯಲ್ಲಿ ನೆರೆದಿದ್ದವರಲ್ಲಿ ರೋಮಾಚಂನ ಉಂಟು ಮಾಡಿತು. ವಿರೂಪಾಕ್ಷಪ್ಪ ಕ್ಷತ್ರಿಯ ಅವರು ನಡೆಸಿಕೊಟ್ಟ ತೊಗಲು ಗೊಂಬೆಯಾಟ, ಅಶೋಕ ಸುತಾರ ಅವರ ದೊಡ್ಡಾಟವು ಹಳೆಯ ಕಲೆಗಳನ್ನು ಉಳಿಸಿ ಬೆಳೆಸುವ ಕಾರ್ಯ ಮಾಡಿತು.

ಸಮೂಹ ನೃತ್ಯ, ಗೀಗಿ ಪದ, ಲಾವಣಿ ಪದ, ಡೊಳ್ಳಿನ ಪದಗಳನ್ನು ಹಾಡುವ ಮೂಲಕ ಸಂಸ್ಕೃತಿಯ ಪರಿಚಯಿಸುವ ಕಾರ್ಯ ಮಾಡಿದರು.

ಸಮಾರಂಭದಲ್ಲಿ 14 ಜಾನಪದ ಕಲಾ ತಂಡಗಳು ಭಾಗವಹಿಸಿದ್ದವು. ಈ ವೇಳೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಕುಮಾರ ಸಪಡ್ಲ, ನವೀನ ಪತ್ತಾರ ಇದ್ದರು. ಬಸವರಾಜ ಈರನವರ ಕಾರ್ಯಕ್ರಮ ನಿರ್ವಹಿಸಿದರು.

# ಅಧಿಕಾರಿಗಳಿಗೆ ಸೂಚನೆ ನೀಡಲು ಮನವಿ




■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರ ಸಭೆಯಿಂದ ಡಿ.ಓ.ಟಿ. ಲೈಸನ್ಸ್‌ನಲ್ಲಿ ವಿನಾಯಿತಿ ಕೋರುವ ಪ್ರಕರಣಗಳಲ್ಲಿ ಸಂಬಂಧಪಟ್ಟ ಇಲಾಖೆಯಲ್ಲಿ ನೋಂದಣಿ ಮಾಡಿಕೊಂಡಿರುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಉದ್ದಿಮೆ ಪರವಾನಿಗೆಯಲ್ಲಿ ವಿನಾಯತಿ ಇದ್ದರೂ ಕೂಡಾ ನಗರಸಭೆಯಿಂದ ಸ್ಥಳೀಯ ಉದ್ದಿಮೆ ಪರವಾನಿಗೆ ಪಡೆದುಕೊಳ್ಳಬೇಕೆಂದು ತಿಳಿಸುತ್ತಿದ್ದು, ಈ ವಿಷಯವಾಗಿ ಅಧಿಕಾರಿಗಳಿಗೆ ಸೂಚನೆ ನೀಡುವಂತೆ ಕೋರಿ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಹೆಸ್ಕಾಂ ದರಕ್ಕಿಂತ ಪ್ರತಿ ಯುನಿಟ್‌ಗೆ ಹೆಚ್ಚುವರಿಯಾಗಿ ಹಣವನ್ನು ಗದಗ ಕೃಷಿ ಉತ್ಪನ್ನ ಮಾರುಕಟ್ಟೆಯವರು ಆಕರಣೆ ಮಾಡುತ್ತಿದ್ದು, ಇದರಿಂದ ವ್ಯಾಪಾರಸ್ಥರಿಗೆ ಹಾಗೂ ಕೈಗಾರಿಕೋದ್ಯಮಿಗಳಿಗೆ ದೊಡ್ಡ ಪ್ರಮಾಣದಲ್ಲಿ ಹೊರೆಯಾಗುತ್ತಿದೆ. ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ವಿದ್ಯುತ್ ಸಂಪರ್ಕವನ್ನು ಹೆಸ್ಕಾಂಗೆ ಹಸ್ತಾಂತರ ಮಾಡಬೇಕು ಎಂದು ವಿನಂತಿಸಿದರು.

ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸುವುದಾಗಿ ತಿಳಿಸಿದರು. ಸಂಸ್ಥೆಯ ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಎಸ್. ಕಾಲವಾಡ, ಕೋಶಾಧ್ಯಕ್ಷ ಅರವಿಂದ ಎಸ್.ಕಾಮತ, ಆಡಳಿತ ಮಂಡಳಿ ಸದಸ್ಯರಾದ ದಾನಯ್ಯ ವೀರಯ್ಯ ಗಣಾಚಾರಿ ಉಪಸ್ಥಿತರಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರಭಣ್ಣ ಹುಣಸಿಕಟ್ಟಿ ತಿಳಿಸಿದ್ದಾರೆ.

# ವಿಕಲಚೇತನರ ಸ್ನೇಹಿ ಸ್ಕೂಟರ್ ಖರೀದಿಗಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2012-13ನೇ ಸಾಲಿನಿಂದ 2017-18ನೇ ಸಾಲಿನವರೆಗೆ ಎಸ್.ಎಫ್.ಸಿ ಅನುದಾನ ಶೇ.3% ರಷ್ಟು (ಶೇ.30) ರ ಘಟಕದಲ್ಲಿ ಉಳಿತಾಯದ ಮೊತ್ತಕ್ಕೆ ಯೋಜನೆಯ ಅಂಗವಿಕಲರ ವಿಕಲಚೇತನರ ಫಲಾನುಭವಿಗಳಿಗೆ ರೋಣ ಪುರಸಭೆ ವ್ಯಾಪ್ತಿಗೆ ಬರುವ ವಿಕಲಚೇತನರಿಗೆ ಸ್ನೇಹಿ ಸ್ಕೂಟರ್ ಖರೀದಿಸಿ ಪೂರೈಸಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ದಿ. 08-02-2026 ರಂದು ಸಾಯಂಕಾಲ 5-30 ಗಂಟೆಗಳ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಯನ್ನು ಕಚೇರಿ ವೇಳೆಯಲ್ಲಿ ರೋಣ ಪುರಸಭೆ ಕಾರ್ಯಾಲಯ ವಿಷಯ ನಿರ್ವಾಹಕರಿಗೆ ಸಂಪರ್ಕಿಸಬಹುದು. ಈಗಾಗಲೇ ಸೌಲಭ್ಯ ಪಡೆದಂತಹ ಫಲಾನುಭವಿಗಳು ಅರ್ಹರಿರುವುದಿಲ್ಲ. ಅರ್ಜಿ ಮತ್ತು ಹೆಚ್ಚಿನ ಮಾಹಿತಿಗಾಗಿ ಪುರಸಭೆ ಕಾರ್ಯಾಲಯ ರೋಣ ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ 2026-27ನೇ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯ 02 ಗದಗ ಜಿಲ್ಲೆಯ ಆದರ್ಶ ವಿದ್ಯಾಲಯಗಳಲ್ಲಿ 6 ನೇ ತರಗತಿ ದಾಖಲಾತಿಯ ಪ್ರವೇಶ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನ ಫೆಬ್ರವರಿ 25 ಆಗಿದ್ದು, ಪರೀಕ್ಷಾ ದಿನಾಂಕ ಮಾರ್ಚ್ 15 ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಡಯಟ್‌ನ ನೋಡಲ್ ಅಧಿಕಾರಿಗಳಾದ ಜಿ ಎಂ ಮುಂದಿನಮನಿ, ಮೊಬೈಲ್ ಸಂ: 7619277145 ಸಂಪರ್ಕಿಸಬಹುದಾಗಿದೆ.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡದ ಉಪಯೋಜನೆಯಡಿಯಲ್ಲಿ 2024ನೇ ಕ್ಯಾಲೆಂಡರ್ ವರ್ಷದಲ್ಲಿ (01-01-2024 ರಿಂದ 31-12-2024) ಅಂತಾರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಮತ್ತು ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಆನ್ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಕೆಯ ಅವಧಿಯನ್ನು ಫೆಬ್ರವರಿ 10 ರವರೆಗೆ ವಿಸ್ತರಿಸಲಾಗಿದೆ. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅರ್ಹ ಕ್ರೀಡಾಪಟುಗಳು ಅರ್ಜಿಗಳನ್ನು ಅಧಿಕೃತ ಜಾಲತಾಣ https://sevasindhu.karnataka.gov.inಮೂಲಕ ಸಲ್ಲಿಸಬಹುದು.

ಕ್ರೀಡಾಪಟುಗಳು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸಿರಬೇಕು. ಪ್ರೋತ್ಸಾಹಧನವನ್ನು ಕರ್ನಾಟಕದ ಕ್ರೀಡಾಪಟುಗಳಿಗೆ ಮಾತ್ರ ನೀಡುವುದು. ಅಂತಾರಾಷ್ಟ್ರೀಯ/ರಾಷ್ಟ್ರೀಯ/ರಾಜ್ಯಮಟ್ಟದ ತಂಡಗಳನ್ನು ಪ್ರತಿನಿಧಿಸಿ ಸರ್ಕಾರದಿಂದ ಅಂಗಿಕೃತವಾದಂತಹ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾಗಿರಬೇಕು. ಕ್ರೀಡಾಪಟಗಳು ಕರ್ನಾಟಕ ಮೂಲದವರಾಗಿದ್ದು, ಬೇರೆ ರಾಜ್ಯ ಅಥವಾ ಕ್ರೀಡಾ ತಂಡವನ್ನು (Services, Airlines, Railways) ಪ್ರತಿನಿಧಿಸುವ ಕ್ರೀಡಾಪಟುಗಳು ಈ ಪುರಸ್ಕಾರಕ್ಕೆ ಅರ್ಹರಾಗಿರುವುದಿಲ್ಲ. ಸರ್ಕಾರಿ, ಅರೆಸರ್ಕಾರಿ ಇಲಾಖೆಗಳಲ್ಲಿ ನೇಮಕಗೊಂಡು ಸೇವೆ ಸಲ್ಲಿಸುತ್ತಿರುವವರು ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಹಾಗೂ ಪದಕ ಪಡೆದವರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಉಳಿದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ಪಡೆದಿರುವವರು ಅರ್ಹರಿರುವುದಿಲ್ಲ. ಕ್ರೀಡಾಪಟುಗಳು ಆಧಾರ್ ಕಾರ್ಡ್, ಪಡಿತರ ಚೀಟಿ (ration card) ಹಾಗೂ ಆರ್.ಡಿ. ಸಂಖ್ಯೆಯನ್ನು ಒಳಗೊಂಡ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು. ಓಲಂಪಿಕ್/ಏಷ್ಯನ್/ಕಾಮನ್ ವೆಲ್ತ್ ಕ್ರೀಡೆಗಳಲ್ಲಿ ಅಂತಾರಾಷ್ಟ್ರೀಯ ಸಂಸ್ಥೆ ಮತ್ತು ಯುವ ವ್ಯವಹಾರ ಮಂತ್ರಾಲಯದಿಂದ ಮಾನ್ಯತೆ ಪಡೆದ ಕ್ರೀಡಾ ಸಂಸ್ಥೆಗಳು ನಡೆಸುವ ಅಧಿಕೃತ ಚಾಂಪಿಯನ್ ಶಿಪ್ ಗಳಿಗೆ ಮಾತ್ರ ಪ್ರೋತ್ಸಾಹಧನ ನೀಡಲಾಗುವುದು. 6ನೇ ತರಗತಿಯಿಂದ ವ್ಯಾಸಂಗ ಮಾಡುತ್ತಿರುವ ಕ್ರೀಡಾಪಟುಗಳು ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಅಂತಾರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಹಿರಿಯರ ಕ್ರೀಡಾಕೂಟದಲ್ಲಿ ಬಾಗವಹಿಸಿದ ಕ್ರೀಡಾಪಟುಗಳು ಪ್ರೋತ್ಸಾಹಧನಕ್ಕೆ ಅರ್ಹರಿರುವುದಿಲ್ಲ. ಬ್ಯಾಂಕ್ ಖಾತೆ ಕಡ್ಡಾಯವಾಗಿ ಕ್ರೀಡಾಪಟುವಿನ ಹೆಸರಿನಲ್ಲಿರಬೇಕು. ಬ್ಯಾಂಕ್ ಪಾಸ್ ಪುಸ್ತಕದ ಮುಖಪುಟದ ಜೆರಾಕ್ಸ್ ಪ್ರತಿ ಲಗತ್ತಿಸಬೇಕು (ಹೆಸರು, ಖಾತೆ ಸಂಖ್ಯೆ, ಐ.ಎಫ್.ಎಸ್.ಸಿ. ಕೋಡ್ ಇರುವ ಪುಟ).ಹಿಂದಿನ ಕ್ಯಾಲೆಂಡರ್ ವರ್ಷದ (01-01-2024 ರಿಂದ 31-12-2024) ಕ್ರೀಡಾ ಸಾಧನೆಯನ್ನು ಮಾತ್ರ ಪ್ರಸಕ್ತ ಸಾಲಿನ ಪ್ರೋತ್ಸಾಹಧನವನ್ನು ಪಾವತಿಸಲಾಗುವುದು. ಒಂದು ವರ್ಷದಲ್ಲಿ ಒಂದಕ್ಕಿತ ಹೆಚ್ಚಿನ ಯಾವುದೇ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದರೂ ಕೂಡ ಒಂದು ಅತ್ಯುತ್ತಮ ಸಾಧನಗಳಿಗೆ ಮಾತ್ರ ಪ್ರೋತ್ಸಾಹಧನವನ್ನು ಪಾವತಿಸಲಾಗುವುದು ಎಂದು ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ. ಅಂಬೇಡ್ಕರ್ ಮೂರ್ತಿ ಪ್ರತಿಷ್ಠಾಪನೆಗೆ ದೇಣಿಗೆ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಡಾ. ಬಿ.ಆರ್. ಅಂಬೇಡ್ಕರ್ ಮೂರ್ತಿಯ ನಿರ್ಮಾಣಕ್ಕೆ ಗ್ರಾಮ ಪಂಚಾಯಿತಿ ಆಡಳಿತ ಮಂಡಳಿ ಸೇರಿದಂತೆ ಅಂಬೇಡ್ಕರರ ಅಭಿಮಾನಿಗಳು, ಗಣ್ಯರು ಸಹಾಯ ಸಹಕಾರ ನೀಡುತ್ತಿದ್ದಾರೆ. ಡಾ. ಅಂಬೇಡ್ಕರರ ಮೂರ್ತಿ ಪ್ರತಿಷ್ಠಾಪನೆಗೆ ಕೋಮ ಸೌಹಾರ್ತೆಯ ತವರು ಲಿಂ. ತೋಂಟದ ಸಿದ್ದಲಿಂಗ ಸ್ವಾಮೀಜಿಗಳ ನೆಲೆಯಾದ ಡಂಬಳ ಗ್ರಾಮ ಇತಿಹಾಸದ ಪುಟಗಳಲ್ಲಿ ದಾಖಲೆಯಾಗಿ ಉಳಿಯಲಿದೆ ಎಂದು ಡಾ. ಬಿ.ಆರ್. ಅಂಬೇಡ್ಕರ್ ಮೂರ್ತಿ ಪ್ರತಿಷ್ಠಾಪನಾ ಸಮಿತಿ ಅಧ್ಯಕ್ಷ ಮರಿಯಪ್ಪ ಸಿದ್ದಣ್ಣವರ ಅಭಿಪ್ರಾಯಪಟ್ಟರು.

ಡಂಬಳ ಗ್ರಾಮ ಪಂಚಾಯಿತಿಯಲ್ಲಿ ಡಾ. ಅಂಬೇಡ್ಕರರ ಪುತ್ಥಳಿ ನಿರ್ಮಾಣಕ್ಕೆ 50 ಸಾವಿರ ರೂ ದೇಣಿಗೆ ನೀಡಿದ ಸ್ಥಳೀಯ ಯುವ ಮುಖಂಡ ಮಲ್ಲಪ್ಪ ಗವಿಸಿದ್ದಪ್ಪ ಮಠದ ಅವರಿಗೆ ಸಮಿತಿಯು ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮಿತಿಯ ಗೌರವಾಧ್ಯಕ್ಷ ಡಿ. ಪ್ರಸಾದ ಮಾತನಾಡಿ, ಡಾ. ಅಂಬೇಡ್ಕರ್ ಪುತ್ಥಳಿ ಪ್ರತಿಷ್ಠಾಪನೆಗೆ ಎಲ್ಲರೂ ಸಹಕಾರ ನೀಡುತ್ತಿದ್ದಾರೆ. ವಿಶೇಷವಾಗಿ ಸಮಿತಿಯ ಎಲ್ಲಾ ಪದಾಧಿಕಾರಿಗಳು ಹಗಲಿರುಳು ಶ್ರಮಿಸುತ್ತಿದ್ದಾರೆ. ಒಳ್ಳೆಯ ಕಾರ್ಯಗಳು ಶಾಶ್ವತವಾಗಿ ಉಳಿಯಲಿವೆ.

ಪೂರ್ವಭಾವಿ ಸಭೆಯನ್ನು ಮಾಡಿ ಶೀಘ್ರದಲ್ಲೇ ಪುತ್ಥಳಿ ಪ್ರತಿಷ್ಠಾಪನೆ ಕುರಿತು ಚರ್ಚಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಸದಸ್ಯರಾದ ಮಾರುತಿ ಬಿಸನಹಳ್ಳಿ, ಹುಸೇನಸಾಬ್ ಮೂಲಿಮನಿ, ಗೌರವಾಧ್ಯಕ್ಷ ಡಿ. ಪ್ರಸಾದ, ಮರಿತೆಮ್ಮಪ್ಪ ಆದಮ್ಮನವರ, ಕಾರ್ಯದರ್ಶಿ ಮಂಜುನಾಥ ಬಿಸನಹಳ್ಳಿ, ಸಹ ಕಾರ್ಯದರ್ಶಿ ಗವಿಸಿದ್ದಪ್ಪ ಗಿರಿಯಪ್ಪ ಹಾದಿಮನಿ, ಖಜಾಂಚಿ ಮಲ್ಲಿಕಾರ್ಜುನ ಗೌಡಣ್ಣವರ, ಮುಖಂಡರಾದ ಯಲ್ಲಪ್ಪ ಹಾದಿಮನಿ, ಅಶೋಕ ತಳಗೇರಿ, ವೆಂಕಟೇಶ ತಳವಾರ, ಭೀಮಪ್ಪ ವಡ್ಡರ, ಧರ್ಮಣ್ಣ ತಳವಾರ, ಸಣ್ಣನಿಂಗಪ್ಪ ಮಾದರ, ಫಕ್ಕಿರಪ್ಪ ಬಿಸಾಟಿ, ದೇವಪ್ಪ ತಳಗೇರಿ ಮುಂತಾದವರಿದ್ದರು. ಶಿಕ್ಷಕ ಮಲ್ಲಿಕಾರ್ಜುನ ಗೌಡಣ್ಣವರ ಕಾರ್ಯಕ್ರಮ ನಿರೂಪಿಸಿದರು. ಉಪನ್ಯಾಸಕ ಮಂಜುನಾಥ ಬಿಸನಹಳ್ಳಿ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka